# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 225 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 24–03–2024 ಭಾನುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 225 | Title- Code: KARKAN 28269 | Chitradurga | Date: 24-03-2024 Sunday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಗ್ರಾಹಕರಿಗೆ ಗ್ರಾಹಕ ಸಂರಕ್ಷಣಾ ಹಕ್ಕುಗಳೊಂದಿಗೆ ಜವಾಬ್ದಾರಿಗಳ ಜಾಗೃತಿ 2

ರಾಷ್ಟ್ರೀಯ ಪಕ್ಷಗಳಿಗೆ ಸಂದೇಶ ರವಾನಿಸಿದ ಇಮ್ಮಡಿ ಸಿದ್ದರಾಮೇಶ್ವರ ಶ್ರೀ 3

ತುರುವನೂರು ಹೋಬಳಿ ಚೆಕ್‌ಪೋಸ್ಟ್‌ನಲ್ಲಿ ದಾಖಲೆ ಇಲ್ಲದ ರೂ.1.50 ಲಕ್ಷ ವಶ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಸ್ಥಳೀಯರಿಗೆ ಬಿಜೆಪಿ ಟಿಕೆಟ್ ನೀಡಿ

» ಚಿತ್ರದುರ್ಗ

ಏ.26ರಂದು ನಡೆಯಲಿರುವ ಚಿತ್ರದುರ್ಗ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯವತಿಯಿಂದ ಸ್ಥಳೀಯರಾದ ರಘುಚಂದನ್ ರವರಿಗೆ ಪಕ್ಷದವತಿಯಿಂದ ಟೀಕೆಟ್ ನಿಡುವಂತೆ ಆಗ್ರಹಿಸಿ ಅವರ ಬೆಂಬಲಿಗರು ಇಂದು ನಗರದಲ್ಲಿ ಮೆರವಣಿಗೆಯನ್ನು ನಡೆಸಿ ಬಿಜೆಪಿ ಪಕ್ಷದ ಅಧ್ಯಕ್ಷರಿಗೆ ಮನವಿ ಸಲ್ಲಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ವೃತ್ತದಿಂದ ಬಿಜೆಪಿ ಕಚೇರಿಯವರೆಗೂ ಮೆರವಣಿಗೆಯನ್ನು ನಡೆಸಿದ ಅಭಿಮಾನಿಗಳು ದಾರಿಯುದ್ದಕ್ಕೂ, ಗೋ ಬ್ಯಾಕ್ ನಾರಾಯಣಸ್ವಾಮಿ, ಗೋವಿಂದ ಕಾರಜೋಳ, ಸ್ಥಳಿಯರಿಗೆ ಟೀಕೇಟ್ ನೀಡಿ, ನಮಗೆ ಸ್ಥಳಿಯರು ಬೇಕು ಹೊರಗಿನವರು ಬೇಡ, ಎಂ.ಪಿ. ನಮ್ಮ ಕಷ್ಟ ಕೇಳಬೇಕು ಅವರು ಕಷ್ಟವನ್ನು ನಾವು ಕೇಳುವುದಲ್ಲ ಎಂಬ ಘೋಷಣೆಗಳನ್ನು ಕೂಗಲಾಯಿತು.

ಕಳೆದ ಎಲ್ಲಾ ಚುನಾವಣೆಗಳಲ್ಲಿ ಬೇರೆ ಜಿಲ್ಲೆಗಳಿಂದ ಬಂದ ಅಭ್ಯರ್ಥಿಗಳನ್ನು ನಮ್ಮ ಮನೆಯ ಮಕ್ಕಳಂತೆ ಹೋರಾಟ ಮಾಡಿ ಗೆಲ್ಲಿಸಿದ್ದೇವೆ.

ಅವರಿಂದ ನಮ್ಮ ಜಿಲ್ಲೆಗೆ ಯಾವುದೇ ಕೊಡುಗೆಯೂ ಇಲ್ಲ, ನಮ್ಮ ಕಾರ್ಯಕರ್ತರಿಗೂ ಬೆಲೆಯೂ ಇಲ್ಲ. ಗೆಲ್ಲುವವರೆಗೂ ಅಷ್ಟೇ ನಮ್ಮನ್ನು ಬಳಸಿಕೊಂಡು ನಂತರ ಜಿಲ್ಲೆಯನ್ನು, ಜಿಲ್ಲೆಯ ಜನರನ್ನು ಕಡೆಗಣಿಸುತ್ತಾರೆ. ಈ ಹಿನ್ನೆಲೆಯಲ್ಲಿ ನಮ್ಮ ಜಿಲ್ಲೆಯ ಅಭಿವೃದ್ಧಿಗೆ ಶ್ರಮಿಸುವ ಹಾಗೂ ಕಾರ್ಯಕರ್ತರ ಬಗ್ಗೆ ಕಾಳಜಿ ಹೊಂದಿರುವ ಸ್ವಾಭಿಮಾನದ ಅಭ್ಯರ್ಥಿಯಾದ ಎಂ.ಸಿ ರಘುಚಂದನ್‌ರವರಿಗೆ ಬಿ.ಜೆ.ಪಿ ಟಿಕೇಟ್ ನೀಡಬೇಕೆಂದು ರಾಜ್ಯ ಮತ್ತು ಕೇಂದ್ರ ನಾಯಕರಿಗೆ ಮತದಾರರ ಅಭಿಪ್ರಾಯದ ಕುರಿತ ಸಂದೇಶವನ್ನು ಕಳುಹಿಸುವಂತೆ ಮನವಿ ಮಾಡಲಾಯಿತು.




ಐತಿಹಾಸ ಹಿನ್ನಲೆಯುಳ್ಳ ಈ ಜಿಲ್ಲೆಯೂ ಸುತ್ತ ಮುತ್ತಲಿನ ಹೊಸ ಜಿಲ್ಲೆಗಳಿಗಿಂತ ತುಂಬ ಹಿಂದುಳಿದ ಜಿಲ್ಲೆಯಂತಿದೆ. ಕಾರಣ ಈ ಜಿಲ್ಲೆಯಲ್ಲಿ ಪದವಿ ಪಡೆದ ವಿದ್ಯಾರ್ಥಿಗಳಿಗೆ ನಿರುದ್ಯೋಗದ ಸಮಸ್ಯೆ, ನೀರಾವರಿ ಸಮಸ್ಯೆಯಿದ್ದು, ರೈತರು ಮಳೆ ಮತ್ತು ಬೋರವೆಲ್‌ಗಳನ್ನು ನಂಬಿ ಬೆಳೆ ಬೆಳೆಯುವ ಪರಿಸ್ಥಿತಿ ಇದೆ ಮಳೆಯ ಅಭಾವದ ಕಾರಣದಿಂದ ರೈತರು ಕೃಷಿಗಾಗಿ ಸಾಲ ಸೂಲ ಮಾಡಿ ಸಂಕಷ್ಟಕ್ಕೆ ಗುರಿಯಾಗಿ ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಬಂದು ಒದಗಿದೆ. ಚಿತ್ರದುರ್ಗ ಜಿಲ್ಲೆಯನ್ನು ಹಲವು ವರ್ಷಗಳಿಂದಲೂ ಹೊರಗಿನವರೂ ಬಂದು ಈ ಜಿಲ್ಲೆಯಲ್ಲಿ ಆಡಳಿತ ಮಾಡುತ್ತಿರುವುದರಿಂದ ಈ ಜಿಲ್ಲೆಯೂ ಅತ್ಯಂತ ಹಿಂದುಳಿಯಲೂ ಕಾರಣವಾಗಿದೆ.

ಆದ್ದರಿಂದ ನಮ್ಮ ಜಿಲ್ಲೆಯ ಸಮಸ್ಯೆಯನ್ನು ಅರ್ಥಮಾಡಿಕೊಂಡು ಆ ಮೂಲಭೂತ ಸಮಸ್ಯೆಗಳನ್ನು ಬಗೆಹರಿಸಲು ಶ್ರಮಪಡುವ ಸ್ಥಳೀಯ ನಾಯಕರಿಗೆ ಟಿಕೇಟ್ ಕೊಟ್ಟು ಸಹಕರಿಸಿದ್ದೆ ಆದರೆ ನಮ್ಮ ಜಿಲ್ಲೆಯೂ ಇತರೆ ಜಿಲ್ಲೆಗಳಿಗಿಂತ ಹೆಚ್ಚಿನ ಅಭಿವೃದ್ಧಿ ಹೊಂದುವುದರಲ್ಲಿ ಯಾವುದೇ ಸಂದೇಹವಿರುವುದಿಲ್ಲ. "ನಮ್ಮ ಕೂಗು ನಮ್ಮ ಜಿಲ್ಲೆಯ ಉಳಿವಿಗಾಗಿ ಸ್ವಾಭಿಮಾನಕ್ಕಾಗಿ ಎಷ್ಟು ಅಂತ ದುಡಿಯೋಣ. ನಮ್ಮವರಿಗಾಗಿ ಸ್ಪಂದಿಸೋಣ. ಸ್ಥಳೀಯರಾದ ಹಾಗೂ ಯುವ ಮುಖಂಡರಾದ ಎಂ.ಸಿ ರಘುಚಂದನ್‌ರವರಿಗೆ ಪಕ್ಷದಿಂದ ಟಿಕೇಟ್ ನೀಡಿ ನಾವು ಅತಿ ಹೆಚ್ಚು ಮತಗಳ ಅಂತರದಿಂದ ಗೆಲ್ಲಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

## ಬಿಜೆಪಿ ಕಚೇರಿ ಕಿಟಕಿ ಗಾಜು ಪುಡಿ ಪುಡಿ



ರಘುಚಂದನ್ ರವರಿಗೆ ಬಿಜೆಪಿ ಪಕ್ಷದ ಟೀಕೇಟ್ ನೀಡುವಂತೆ ಆಗ್ರಹಿಸುವ ಸಮಯದಲ್ಲಿ ಯಾರೂ ಕಿಡಿಗೇಡಿಗಳು ಬಿಜೆಪಿ ಪಕ್ಷದ ಕಿಟಕಿಯ ಗಾಜನ್ನು ಹೊಡೆದಿದ್ದಾರೆ, ಇದರಿಂದ ಕಿಟಕಿಯ ಗಾಜು ಪುಡಿ ಪುಡಿಯಾಗಿದೆ. ಬಿಜೆಪಿ ಪಕ್ಷದ ಕಚೇರಿಗೆ ನುಗ್ಗಲು ಯತ್ನಿಸಿದ ಅಭಿಮಾನಿಗಳನ್ನು ಪೋಲಿಸರ ತಡೆಯುವುದರ ಮೂಲಕ ಮೇಲಕ್ಕೆ ಕಚೇರಿಗೆ ಹೋಗದಂತೆ ತಡೆದಿದ್ದಾರೆ, ಆದರೂ ಸಹಾ ಆದಾವ ಮಾಯೆದಲ್ಲಿಯೂ ಯಾರು ಕಿಟಕಿಯ ಗಾಜನ್ನು ಒಡೆದು ಪುಡಿ ಪುಡಿ ಮಾಡಿದ್ದಾರೆ.

## ಫಾಸ್ಟ್ ನ್ಯೂಸ್

### ಮಾ.26ರಂದು ಪೂರ್ವಭಾವಿ ಸಭೆ

» ಚಿತ್ರದುರ್ಗ

ಏಪ್ರಿಲ್ 5ರಂದು ಡಾ. ಬಾಬು ಜಗಜೀವನರಾಂ ಅವರ 117 ನೇ ಜನ್ಮ ದಿನಾಚರಣೆ ಹಾಗೂ ಏ.14ರಂದು ಡಾ. ಬಿ.ಆರ್.ಅಂಬೇಡ್ಕರ್ ಅವರ 133ನೇ ಜನ್ಮ ದಿನಾಚರಣೆಯನ್ನು ಲೋಕಸಭಾ ಸಾರ್ವತ್ರಿಕ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಈ ಗಣ್ಯ ವ್ಯಕ್ತಿಗಳ ದಿನಾಚರಣೆಯನ್ನು ಆಚರಿಸುವ ಕುರಿತು ಇದೇ ಮಾರ್ಚ್ 26ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ. ಪೂರ್ವಭಾವಿ ಸಭೆಗೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಸಮುದಾಯದ ಮುಖಂಡರು, ಸಂಘಟನೆಗಳ ಪದಾಧಿಕಾರಿಗಳು, ಸಾರ್ವಜನಿಕರು ಸಭೆಗೆ ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆನ್‌ಲೈನ್ ಶುಲ್ಕ: ಹೆಸರಿನಲ್ಲಿ ವಂಚನೆ

» ಚಿತ್ರದುರ್ಗ

ಉದ್ದಿಮೆ ಪರವಾನಿಗೆ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸುವಂತೆ ಅನಾಮಿಕ ವ್ಯಕ್ತಿಗಳು ನಗರಸಭೆ ಹೆಸರಿನಲ್ಲಿ ಕರೆ ಮಾಡಿ ವಂಚನೆಗೆ ಯತ್ನಿಸುತ್ತಿರುವ ಪ್ರಕರಣಗಳು ಬೆಳಕಿಗೆ ಬಂದಿವೆ. ನಗರಸಭೆಯಿಂದ ಆನ್‌ಲೈನ್ ಮೂಲಕ ಶುಲ್ಕ ಪಾವತಿಸಿಕೊಳ್ಳಲು ಯಾರನ್ನೂ ನಿಯೋಜಿಸಿರುವುದಿಲ್ಲ. ಅಂಗಡಿ ಹಾಗೂ ಉದ್ದಿಮೆ ಮಾಲೀಕರಿಗೆ ಆನ್‌ಲೈನ್ ಮೂಲಕ ಉದ್ದಿಮೆ ಶುಲ್ಕ ಪಾವತಿಸುವಂತೆ ಕರೆ ಬಂದರೆ, ತಕ್ಷಣವೇ ಆರೋಗ್ಯ ನಿರೀಕ್ಷಕರನ್ನು ಸಂಪರ್ಕಿಸಿ ಮಾಹಿತಿ ನೀಡಬೇಕು. ವಂಚನೆಗೆ ಒಳಗಾಗಬಾರದು ಎಂದು ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ.

### ಪೊಲೀಸ್ ಕಾರ್ಯಚರಣೆ : ರೂ.42 ಸಾವಿರ ಮದ್ಯ ವಶ

» ಚಿತ್ರದುರ್ಗ

ಮಾದರಿ ನೀತಿ ಸಂಹಿತೆ ಹಿನ್ನಲೆಯಲ್ಲಿ ಮಾರ್ಚ್ 22 ಬೆಳಿಗ್ಗೆ 9 ಗಂಟೆಯಿಂದ ಮಾರ್ಚ್ 23ರ ಬೆಳಿಗ್ಗೆ 9 ಗಂಟೆಯವರೆಗೆ ಜಿಲ್ಲೆಯಾದ್ಯಂತ ಪೊಲೀಸ್ ಕಾರ್ಯಾಚರಣೆಯಲ್ಲಿ ರೂ.42,105 ಮೌಲ್ಯದ 85.37 ಲೀಟರ್ ಮದ್ಯ ವಶ ಪಡಿಸಿಕೊಳ್ಳಲಾಗಿದೆ. ಈ ಸಂಬಂಧ 11 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೆಂದ್ರ ಕುಮಾರ್ ಮೀನಾ ಮಾಹಿತಿ ನೀಡಿದ್ದಾರೆ. ನೀತಿ ಸಂಹಿತೆ ಜಾರಿಯಾದಾಗಿನಿಂದ ಇಲ್ಲಿಯವರೆಗೆ ರೂ.45,38,000 ನಗದು, ರೂ.1,08,687 ಮೌಲ್ಯದ 232 ಲೀಟರ್ ಮದ್ಯ, ರೂ.47,760 ಮೌಲ್ಯದ ಇತರೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಯಾವುದೇ ರೀತಿಯ ಮಾದಕ ವಸ್ತುಗಳು ಹಾಗೂ ಚಿನ್ನಾಭರಣಗಳನ್ನು ದೊರಕಿಲ್ಲ ಎಂದಿದ್ದಾರೆ.

### ರೂ.6.32 ಲಕ್ಷದ ಗಾರ್ಮೆಂಟ್ಸ್ ವಶ

» ಚಿತ್ರದುರ್ಗ

ಮಾದರಿ ನೀತಿ ಸಂಹಿತೆ ಹಿನ್ನಲೆಯಲ್ಲಿ ವಾಣಿಜ್ಯ ತೆರಿಗೆ ಇಲಾಖೆಯಿಂದ ಮಾರ್ಚ್ 22 ಬೆಳಿಗ್ಗೆ 9 ಗಂಟೆಯಿಂದ ಮಾರ್ಚ್ 23 ರ ಬೆಳಿಗ್ಗೆ 9 ಗಂಟೆಯವರೆಗೆ ಜಿಲ್ಲೆಯಾದ್ಯಂತ ಕಾರ್ಯಾಚರಣೆ ನಡೆಸಿ, ರೂ.6,32,553 ಮೌಲ್ಯದ 5479 ಗಾರ್ಮೆಂಟ್ಸ್ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ. ಈ ಸಂಬಂದ ರೂ.62968 ಜಿ.ಎಸ್.ಟಿ ದಂಡ ವಸೂಲಿ ಮಾಡಲಾಗಿದೆ.

# ನಾಳೆಯಿಂದ ತಾಲ್ಲೂಕಿನ 18 ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಆರಂಭ: ಬಿಇಓ

» ಚಳ್ಳಕೆರೆ

ಪ್ರಸ್ತುತ 2024ರ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ ಮಾ.25ರಿಂದ ಏ.6ರ ತನಕ ನಡೆಯಲಿವೆ. ಪರೀಕ್ಷೆಗೆ ಸಂಬಂಧಪಟ್ಟ ಎಲ್ಲಾ ಸಿದ್ದತೆಗಳನ್ನು ಪೂರೈಸಲಾಗಿದೆಯಲ್ಲದೆ, ಪರೀಕ್ಷಾರ್ಥಿಗಳಿಗೂ ಸಹ ಆತ್ಮಸ್ಥೈರ್ಯದಿಂದ ಪರೀಕ್ಷೆ ಎದುರಿಸುವಂತೆ ತಿಳಿಸಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಪತ್ರಿಕೆಗೆ ಮಾಹಿತಿ ನೀಡಿ, ತಾಲ್ಲೂಕಿನ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರೌಢಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸುವ ಹಿನ್ನೆಲೆಯಲ್ಲಿ ತಾಲ್ಲೂಕಿನ ಎಲ್ಲಾ ಪ್ರೌಢಶಾಲೆಗಳಲ್ಲೂ ಮುಖ್ಯ ಶಿಕ್ಷಕರು, ಶಿಕ್ಷಕರು ಇಲಾಖೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಉನ್ನತಮಟ್ಟಕ್ಕೆ ತಗೆದುಕೊಂಡು ಹೋಗಲು ದಕ್ಷತೆಯಿಂದ ಕಾರ್ಯನಿರ್ವಹಿಸಿದ್ದಾರೆಂದರು.

ಪ್ರಸ್ತುತ ಈ ವರ್ಷ ತಾಲ್ಲೂಕಿನ 18 ಕೇಂದ್ರಗಳಲ್ಲಿ ಸೋಮವಾರದ ಪರೀಕ್ಷೆ ಆರಂಭಗಾಲಿದೆ.




ಒಟ್ಟು 5687 ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಹತೆ ಪಡೆದಿದ್ದಾರೆ. ನಗರ ಪ್ರದೇಶದಲ್ಲಿ 6, ಗ್ರಾಮೀಣ ಪ್ರದೇಶದಲ್ಲಿ 12 ಕೇಂದ್ರಗಳು ಇವೆ. ಎಲ್ಲಾ ಪರೀಕ್ಷಾ ಕೇಂದ್ರದಲ್ಲಿ ನಕಲು ತಡೆಯಲು ಸಿಸಿ ಕ್ಯಾಮರ ಅಳವಡಿಸಲಾಗಿದೆ. ಹೊರ ಭಾಗದಲ್ಲಿ ಪೊಲೀಸ್ ಇಲಾಖೆಯ ಭದ್ರತೆ ನಿಯೋಜಿಸಿದೆ. ಪರೀಕ್ಷಾ ಕೇಂದ್ರದ ಒಳಭಾಗದಲ್ಲಿ ಕಾಪಿಯನ್ನು ತಡೆಗಟ್ಟಲು ವಿಶೇಷ ಸ್ವಾಡನ್ನು ನೇಮಿಸಲಾಗಿದೆ. ತಾಲ್ಲೂಕು ಮಟ್ಟದ ಹಲವಾರು ಪ್ರಮುಖ ಅಧಿಕಾರಿಗಳು ಪರೀಕ್ಷಾ ಕೇಂದ್ರದ ಮೇಲ್ತುಸುವಾರಿಯನ್ನು ನಡೆಸಲಿದ್ದಾರೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶಕ್ಕೆ ಎಲ್ಲಾ ರೀತಿಯ ಪ್ರಯುಕ್ತ ಮುಂದುವರೆದಿವೆ. ವಿದ್ಯಾರ್ಥಿಗಳು ಎಲ್ಲಾ ವಿಷಯದಲ್ಲಿ ಅಭ್ಯಾಸ ಮಾಡಿದ್ದು ಪರೀಕ್ಷೆ ಎದುರಿಸುವ ಸಾಮರ್ಥ್ಯ ಹೊಂದಿದ್ದಾರೆ.

ವಿಶೇಷವಾಗಿ ಎಲ್ಲಾ 18 ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನ ಪತ್ರಿಕೆ ತಲುಪಿಸಲು 7 ಮಾರ್ಗ ಹಾಗೂ 7 ಮಾರ್ಗಾಧಿಕಾರಿಗಳನ್ನು ಪೊಲೀಸ್ ಭದ್ರತೆಯೊಂದಿಗೆ ನಿಯೋಜಿಸಲಾಗಿದೆ. 18 ಮುಖ್ಯ ಅಧೀಕ್ಷಕರು, 18 ಸ್ಥಾನಿಕ ಅಧೀಕ್ಷಕರು, ಕಾರ್ಯನಿರ್ವಹಿಸುವರು. ಪರೀಕ್ಷಾ ಕೇಂದ್ರಕ್ಕಾಗಿ ತಾಲ್ಲೂಕಿನಾದ್ಯಂತ 220 ಕೊಠಡಿ ಮೇಲ್ವಿಚಾರಕರು ಪರೀಕ್ಷೆಯ ಮೇಲುಸ್ತುವಾರಿ ವಹಿಸುವರು. ಪರೀಕ್ಷೆಯನ್ನು ಸುಗಮವಾಗಿ ನಡೆಸುವ ನಿಟ್ಟಿನಲ್ಲಿ ಮಾ.25ರಿಂದ ಏ.6ರ ತನಕ 303 ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದಾರೆ ಎಂದರು.

## ಚಿತ್ರದುರ್ಗ ಮಾಜಿ ಸಂಸದ ಮೂಡಲಗಿರಿಯಪ್ಪ ನಿಧನ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಮಾಜಿ ಸಂಸದ – ಸಿರಾ ಕ್ಷೇತ್ರದ ಮಾಜಿ ಶಾಸಕ ಸಿ.ಪಿ. ಮೂಡಲಗಿರಿಯಪ್ಪ ಸುಮಾರು–85 ವರ್ಷ ಇವರು ಶನಿವಾರ ಮಧ್ಯಾನ್ಹ 1 ಗಂಟೆ ಸುಮಾರಿಗೆ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಅನಾರೋಗ್ಯದಿಂದ



1940-2024

ನಿಧನರಾದರು.ಮೃತರು ಪತ್ನಿ , ಓರ್ವ ಪುತ್ರಿ ಹಾಗೂ ಸೊರಾ ಕ್ಷೇತ್ರದ ಮಾಜಿ ಶಾಸಕ ರಾಜೇಶ್ ಅವರನ್ನು ಸೇರಿದಂತೆ ಅಪಾರ ಕುಟುಂಬ ವರ್ಗದವರನ್ನು ಅಗಲಿದ್ದಾರೆ. ಇಂದು ಭಾನುವಾರ ಅಂತಿಮ ಸಂಸ್ಕಾರ ಬೆಳಿಗ್ಗೆ 10 ಗಂಟೆಗೆ ಚಿರತಹಳ್ಳಿ ತೋಟದಮನೆಯಲ್ಲಿ (ಗಣೇಶ ಗುಡಿ ಎಸ್ಟೇಟ್) ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಚಿರತಹಳ್ಳಿ ಗ್ರಾಮದಲ್ಲಿ 24/6/ 1940 ರಂದು ಜನಿಸಿದರು.

ಶಿಕ್ಷಣವನ್ನು ಸರ್ಕಾರಿ ಕಾನೂನು ಕಾಲೇಜು ಮತ್ತು ಬೆಂಗಳೂರು ವಿಶ್ವವಿದ್ಯಾಲಯ , ಬೆಂಗಳೂರು (ಕರ್ನಾಟಕ) ದಿಂದ ಬಿ.ಎ ಮತ್ತು ಬಿ.ಎಲ್‌ನಲ್ಲಿ ಪೂರ್ಣಗೊಳಿಸಿದರು.1989 –1991ರಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ ಆಯ್ಕೆಯಾದರು. ನಂತರ 1991–1996 ರಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ 2ನೇ ಬಾರಿಗೆ ಸಂಸದರಾಗಿ ಆಯ್ಕೆಯಾದರು.1979 ಮತ್ತು 1982ಜಿಲ್ಲಾ ಕಾಂಗ್ರೆಸ್ ಸಮಿತಿ (ಇಂದಿರಾ) ಡಿಸಿಸಿ (ಐ), ಕರ್ನಾಟಕ ಪ್ರಧಾನ ಕಾರ್ಯದರ್ಶಿಯಾಗಿದ್ದರು. 1989ಕರ್ನಾಟಕದಲ್ಲಿ ಪ್ರದೇಶ ಕಾಂಗ್ರೆಸ್ ಸಮಿತಿ (ಇಂದಿರಾ) ಪಿಸಿಸಿ (ಐ) ಕಾನೂನು ಕೋಶದ ಅಧ್ಯಕ್ಷರಾಗಿದ್ದರು.ನಂತರ 1980 ರಲ್ಲಿ ಕರ್ನಾಟಕ ಸರ್ಕಾರದಲ್ಲಿ ಸಂವಿಧಾನ ತಿದ್ದುಪಡಿ ಸಮಿತಿಯ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಬಳಿಕ 1985 ಮತ್ತು 1989 ಸಿರಾ ಕ್ಷೇತ್ರದ ವಿಧಾನಸಭಾ ಸದಸ್ಯರಾದರು. ಜೊತೆಗೆ ಅಧೀನ ಶಾಸನ ಸಮಿತಿಯ ಸದಸ್ಯರಾಗಿ ಕರ್ತವ್ಯ ನಿರ್ವಹಿಸಿದರು. 1989 ಹಾಗೂ 1991 ಚಿತ್ರದುರ್ಗದಿಂದ 9 ನೇ ಲೋಕಸಭೆಯಲ್ಲಿ ಸಂಸದರಾಗಿ ಆಯ್ಕೆಯಾದರು. ಇದರ ಜೊತೆಗೆ ಕಾನೂನು ಮತ್ತು ನ್ಯಾಯ ಸಚಿವಾಲಯದ ಸಲಹಾ ಸಮಿತಿಯ ಸದಸ್ಯರಾಗಿ ನೇಮಕವಾದರು. 1991 ಮತ್ತು 1996 ಚಿತ್ರದುರ್ಗದಿಂದ 10 ನೇ ಲೋಕಸಭೆಯಲ್ಲಿ ಸಂಸದರಾಗಿ ಜಯಗಳಿಸಿದರು.ಆಹಾರ, ನಾಗರಿಕ ಸರಬರಾಜು ಮತ್ತು ಸಾರ್ವಜನಿಕ ವಿತರಣಾ ಸಮಿತಿಯ ಸದಸ್ಯ ಮತ್ತು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪಸಮಿತಿ– ಎ.ಸದನದ ಸಭೆಗಳಿಗೆ ಸದಸ್ಯರ ಗೈರುಹಾಜರಿ ಸಮಿತಿಯ ಸದಸ್ಯ. ಕಾರ್ಮಿಕ ಸಚಿವಾಲಯದ ಸಲಹಾ ಸಮಿತಿಯ ಸದಸ್ಯರಾಗಿ ಈಗೆ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ.

### ಪ್ರಮುಖ ಸುದ್ದಿ

# ಬೊಮ್ಮನಕುಂಟೆ ಶ್ರೀಓಬಳನರಸಿಂಹಸ್ವಾಮಿ ಜಾತ್ರೆ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಪರಶುರಾಮಪುರ ಹೋಬಳಿಯ ಬೊಮ್ಮನಕುಂಟೆ ಗ್ರಾಮದ ಶ್ರೀಓಬಳನರಸಿಂಹಸ್ವಾಮಿ ಜಾತ್ರಾ ಮಹೋತ್ಸವ ಆರಂಭವಾಗಿದ್ದು, ಶನಿವಾರ ಗಂಗಾಪೂಜೆ ಕಾರ್ಯಕ್ರಮವನ್ನು ನೂರಾರು ಭಕ್ತರ ಸಮ್ಮುಖದಲ್ಲಿ ಯಶಸ್ವಿಯಾಗಿ ನಡೆಸಲಾಯಿತು.

ಈ ಬಗ್ಗೆ ಮಾಹಿತಿ ನೀಡಿದ ದೇವಸ್ಥಾನದ ಸಮಿತಿ ನಿರ್ದೇಶಕ ಎಸ್.ಒ.ಚಿನ್ನೋಬಯ್ಯ, ಪಾಲನಾಯಕಸ್ವಾಮಿ, ಕರಿಯಮ್ಮ, ಮುಗುದಾಳಬೆಟ್ಟಕರಿಯಮ್ಮ, ತಿಪ್ಪನಹಳ್ಳಿ ಪಾಲನಾಯಕಸ್ವಾಮಿ ದೇವರುಗಳೊಂದಿಗೆ ಭವ್ಯವಾದ ಮೆರವಣಿಗೆಯಲ್ಲಿ ಎಲ್ಲಾ ಉತ್ಸವ ಮೂರ್ತಿಗಳನ್ನು ವೇದಾವತಿ ನದಿಪಾತ್ರಕ್ಕೆ ತರಲಾಯಿತು.


ಪುಟ ↘ 2




## ಫಾಸ್ಟ್ ನ್ಯೂಸ್

### ಬಿಎಸ್‌ಎನ್‌ಎಲ್ 4ಜಿ ಸಿಮ್ ಬದಲಾವಣೆ ಉಚಿತ

» **ಚಿತ್ರದುರ್ಗ**

ಬಿಎಸ್‌ಎನ್‌ಎಲ್ ಬಳಕೆದಾರರು ಅತಿ ವೇಗದ 4ಜಿ ನೆಟ್‌ವರ್ಕ್ ಸೇವೆ ಪಡೆಯಲು ತಮ್ಮ ಹಳೆಯ ಸಿಮ್‌ಗಳನ್ನು ಮೇಲ್ದರ್ಜೆಗೆ ಏರಿಸಿಕೊಳ್ಳುವುದು ಕಡ್ಡಾಯವಾಗಿದೆ. ಆಧಾರ್, ಓಟರ್ ಐಡಿ ಅಥವಾ ಡ್ರೈವಿಂಗ್ ಲೈಸೆನ್ಸ್‌ನೊಂದಿಗೆ ಹತ್ತಿರದ ಬಿಎಸ್‌ಎನ್‌ಎಲ್ ಗ್ರಾಹಕರ ಸೇವಾ ಕೇಂದ್ರಗಳಿಗೆ ತೆರಳಿ, ಉಚಿತವಾಗಿ ಹಳೆಯ ಸಿಮ್ ಬದಲು ಹೊಸ 4ಜಿ ಸಿಮ್ ಪಡೆಯಬಹುದಾಗಿದೆ. ಗ್ರಾಹಕರ ಅನುಕೂಲಕ್ಕಾಗಿ ರಜಾದಿನಗಳಾದ ಮಾರ್ಚ್ 24 ಹಾಗೂ 31ರ ಭಾನುವಾರ, ಮಾರ್ಚ್ 29 ಗುಡ್ ಫ್ರೈಡೆ ದಿನದಂದು ಗ್ರಾಹಕ ಸೇವಾ ಕೇಂದ್ರಗಳು ಕಾರ್ಯನಿರ್ವಹಿಸಲಿವೆ. ಇದರ ಸದುಪಯೋಗ ಪಡೆದುಕೊಳ್ಳುವಂತೆ ಪ್ರಕಟಣೆ ತಿಳಿಸಿದೆ.

### ಚಳ್ಳಕೆರೆ ಎಚ್‌ಪಿಪಿಸಿ ಕಾಲೇಜು ಅರ್ಥಶಾಸ್ತ್ರ ಸಹಾಯಕ ಪ್ರಾಧ್ಯಾಪಕ ಡಿ.ಎನ್.ರಘುನಾಥ ಡಾಕ್ಟರೇಟ್

» **ಚಳ್ಳಕೆರೆ**



ದಾವಣಗೆರೆ ವಿಶ್ವವಿದ್ಯಾಲಯ ತನ್ನ 11ನೇ ಘಟಿಕೋತ್ಸವದಲ್ಲಿ ಚಳ್ಳಕೆರೆಯ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ಸಹಾಯಕ ಪ್ರಾಧ್ಯಾಪಕ ಪ್ರೊ. ಡಿ. ಎನ್. ರಘುನಾಥರವರಿಗೆ ಡಾಕ್ಟರೇಟ್ ನೀಡಿ ಗೌರವಿಸಿದೆ. ದಾವಣಗೆರೆ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ಕೆ.ಬಿ.ರಂಗಪ್ಪ ಮಾರ್ಗದರ್ಶನದಲ್ಲಿ ಎನ್.ಎಕಾನಾಮಿಕ್ ಅನಾಲೀಸ್ ಆಫ್ ಪೋಮಾಗ್ರಾನೆಟ್ ಕಲ್ಟಿವೇಷನ್ ಇನ್ ಚಿತ್ರದುರ್ಗ ಜಿಲ್ಲೆ ಎಂಬ ವಿಷಯದ ಬಗ್ಗೆ ಮಹಾಪ್ರಬಂಧ ಮಂಡಿಸಿದ್ದರು. ಅದರನ್ನು ಪುರಸ್ಕರಿಸಿದ ವಿಶ್ವವಿದ್ಯಾಲಯ ಡಾಕ್ಟರೇಟ್ ಪ್ರಧಾನ ಮಾಡಿದೆ.

### ಬೊಮ್ಮನಕುಂಟೆ ಓಬಳ ನರಸಿಂಹಸ್ವಾಮಿ ಜಾತ್ರೆ

» **ಮೊದಲ ಪುಟದಿಂದ**

ಈ ಸಂದರ್ಭದಲ್ಲಿ ವಿವಿಧ ಜಾನಪದ ಕಲಾತಂಡಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದವು. ಈ ಸಂದರ್ಭದಲ್ಲಿ ನೆರೆದಿದ್ದ ಭಕ್ತರು ದೇವರಿಗೆ ಜಯಕಾರ ಹಾಕಿದರು. ತಮ್ಮ ಇಷ್ಟಾರ್ಥಗಳನ್ನು ಈಡೇರಿಸುವಂತೆ ದೇವರಲ್ಲಿ ಪ್ರಾರ್ಥಿಸಿದರು. ಸರ್ವಾಲಂಕಾರ ಹಾಗೂ ಹೂವಿನ ಪಲ್ಲಕಿಯೊಂದಿಗೆ ಸ್ವಾಗತಿಸಿ ಗಂಗಾಪೂಜೆಯನ್ನು ನೆರವೇರಿಸಿದ ನಂತರ ನೆರೆದಿದ್ದ ಭಕ್ತರಿಗೆ ಅನ್ನಸಂತರ್ಪಣೆ ಮಾಡಲಾಯಿತು. ಬಿಸಿಲಿನಲ್ಲಿ ಬಂದ ಭಕ್ತರಿಗೆ ಕಾಲುವೇಹಳ್ಳಿ ರಾಘವೇಂದ್ರ ಹಾಗೂ ಸ್ನೇಹಬಳಗದಿಂದ ಮಜ್ಜಿಗೆ ವ್ಯವಸ್ಥೆಯನ್ನು ಮಾಡಿದರು. ನಾಳೆ 24ರ ಭಾನುವಾರ ಬೆಳಗ್ಗೆ ಮೇಲುದೀಪಾರಾಧನೆ, ತೀರ್ಥಪ್ರಸಾದ ವಿನಿಯೋಗ ಕಾರ್ಯಕ್ರಮವಿರಲಿದೆ.. ಈ ಸಂದರ್ಭದಲ್ಲಿ ಈ.ಅಂಜಿನಪ್ಪ, ಪೂಜಾರಿ ನರಸಪ್ಪ, ಎನ್.ಎಂ.ಲಿಂಗಪ್ಪ, ರಾಮಣ್ಣ, ಅಂಜಿನಮೂರ್ತಿ, ಕಾಲುವೇಹಳ್ಳಿರಾಘವೇಂದ್ರ, ಮಾರುತಿ, ಮಂಜಪ್ಪ ಮೊದಲಾದವರು ಭಾಗವಹಿಸುವರು.

### ಮದ್ಯ ಮಾರಾಟ, ಸರಬರಾಜು ನಿಷೇಧ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯಾದ್ಯಂತ ಮಾರ್ಚ್ 25 ರಂದು ಹೋಳಿ ಹಬ್ಬದ ನಿಮಿತ್ತ ಬೆಳಿಗ್ಗೆ 6 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಜಿಲ್ಲೆಯಾದ್ಯಂತ ಮದ್ಯ ಮಾರಾಟ ಹಾಗೂ ಮದ್ಯ ಸರಬರಾಜು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಆದೇಶಿಸಿರುತ್ತಾರೆ.

### ಬಿಎಸ್‌ಎನ್‌ಎಲ್, ಫ್ರಾಂಚೈಸಿ ರಜಾ ದಿನವೂ ಒಪನ್

» **ದಾವಣಗೆರೆ**

ಬಿಎಸ್‌ಎನ್‌ಎಲ್ ಮತ್ತು ಫ್ರಾಂಚೈಸಿ ಎಲ್ಲಾ ಗ್ರಾಹಕರ ಸೇವಾ ಕೇಂದ್ರಗಳು ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಯಲ್ಲಿ ಮಾರ್ಚ್ 24 ಭಾನುವಾರ, ರಜಾ ದಿನಗಳಾದ ಮಾ.29 ಮತ್ತು 31 ರಂದು ತೆರೆದಿರುತ್ತದೆ. ಗ್ರಾಹಕರು ಇದರ ಸದುಪಯೋಗ ಮಾಡಿಕೊಳ್ಳಲು ಬಿಎಸ್‌ಎನ್‌ಎಲ್ ಡೆಪ್ಯೂಟಿ ಜನರಲ್ ಮ್ಯಾನೇಜರ್ ತಿಳಿಸಿದ್ದಾರೆ.


### ಹಳೆಯ ಪೀಠೋಪಕರಣ ಬಹಿರಂಗ ಹರಾಜು

» **ದಾವಣಗೆರೆ**

ದಾವಣಗೆರೆ ರಾಜ್ಯ ಗುಪ್ತವಾರ್ತೆ ಕಚೇರಿಯಲ್ಲಿನ ಹಳೆಯ ಪೀಠೋಪಕರಣ ಮತ್ತು ಕೆ.ಎಫ್.ಸಿ–1958 ರ ಹಳೆ ವಾಹನವನ್ನು ಮಾ.26 ರಂದು ಕಚೇರಿಯಲ್ಲಿ ಬಹಿರಂಗ ಹರಾಜು ಮೂಲಕ ವಿಲೆ ಮಾಡಲಾಗುತ್ತದೆ ಎಂದು ರಾಜ್ಯ ಗುಪ್ತವಾರ್ತೆ ಸಹಾಯಕ ನಿರ್ದೇಶಕರು ತಿಳಿದ್ದಾರೆ.

# ವಿವಿಧ ಮಠಾಧೀಶರ ಭೇಟಿ ಮಾಡಿದ ಬಿವೈಆರ್





» **ಚಿತ್ರದುರ್ಗ**

ಶಿವಮೊಗ್ಗ ಲೋಕಸಭಾ ಚುನಾವಣೆಯಲ್ಲಿ ಗೀತಕ್ಕ, ರಾಘಣ್ಣ ಮಧ್ಯದ ಚುನಾವಣೆ ಅಲ್ಲ ಎರಡು ಪಕ್ಷಗಳ ಸಿದ್ಧಾಂತದ ನಡುವಿನ ಚುನಾವಣೆ ಎದುರಾಳಿ ಯಾರೆಂದು ನಾವು ತಲೆ ಕೆಡಿಸಿಕೊಳ್ಳಲ್ಲ ಬಿಜೆಪಿ ಹೆಮ್ಮರವಾಗಿ ಬೆಳೆದಿದೆ, ಟಿಕೆಟ್ ಫೈಟ್ ಸಹಜ ಎಂದು ಶಿವಮೊಗ್ಗ ಸಂಸದ ಬಿ ವೈ ರಾಘವೇಂದ್ರ ತಿಳಿಸಿದರು.

ಚಿತ್ರದುರ್ಗದಲ್ಲಿ ಬೋವಿ ಮಠ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆ ಬಳಿಕ ಬಿಜೆಪಿ ರಾಜ್ಯದ್ಯಕ್ಷ ಬದಲಾವಣೆ ಎಂದು ಕೆ.ಎಸ್. ಈಶ್ವರಪ್ಪ ಹೇಳಿಕೆ ವಿಚಾರದ ಬಗ್ಗೆ ಮಾತನಾಡಿ, ರಾಜ್ಯಾದ್ಯಕ್ಷ ಸ್ಥಾನ ಸಂಘಟನೆಗೆ ಶಕ್ತಿ ತುಂಬುವ ಜವಾಬ್ದಾರಿ ವಿಜಯೇಂದ್ರಗೆ ಎಷ್ಟು ದಿನವಿರುತ್ತೆ ಒಳ್ಳೆಯ ಕಾರ್ಯ ಮಾಡುತ್ತಾರೆ. ಕೆ ಎಸ್ ಈಶ್ವರಪ್ಪ ನಮ್ಮ ನಾಯಕರು, ಸಮಸ್ಯೆ ಬಗೆಹರಿಯುವ ವಿಶ್ವಾಸವಿದೆ. ಇನ್ನೆರಡು ದಿನದಲ್ಲಿ ಉಳಿದ ಅಭ್ಯರ್ಥಿಗಳಹೆಸರುಘೋಷಣೆಯಾಗಲಿದೆ ಎಂದರು.

ಕೈ ಶಾಸಕರಿಗೆ ಬಿಜೆಪಿಯಿಂದ 50 ಕೋಟಿ ಆಫರ್ ನೀಡ್ತಿದ್ದಾರೆಂದು ಸಿಎಂ ಆರೋಪ ವಿಚಾರದ ಬಗ್ಗೆ ಮಾತನಾಡಿ, ಪಾಪ ಸಿಎಂ ಅವರಿಗೆ ಗ್ಯಾರಂಟಿಯ ಗ್ಯಾರಂಟಿ ಉಳಿಸಿಕೊಳ್ಳಲಾಗ್ತಿಲ್ಲ ಕೈ ಶಾಸಕರಿಗೆ ಕ್ಷೇತ್ರದಲ್ಲಿ ಮುಖ ತೋರಿಸಲು ಆಗುತ್ತಿಲ್ಲ ಅವರ ತಟ್ಟೆ ಮುಚ್ಚಿಕೊಳ್ಳಲು ಇನ್ನೊಬ್ಬರ ಕಡೆ ಬೆರಳು ತೋರುತ್ತಿದ್ದಾರೆ ಎಂದ ಅವರು ಕುಟುಂಬ ರಾಜಕಾರಣಕ್ಕೆ ನಾನು ಸಹ ವಿರೋಧಿಸುತ್ತೇನೆ ಕುಟುಂಬ ರಾಜಕಾರಣ ಎಂದರೆ ಎಲ್ಲವೂ ಒಂದೇ ಕಡೆ ತೀರ್ಮಾನ ಸಿಎಂ, ಅಧ್ಯಕ್ಷ ಎಲ್ಲರೂ ಒಂದೇ ಕುಟುಂಬದವರಾಗಿರುತ್ತಾರೆ. ಕಾಂಗ್ರೆಸ್‌ನ ನೆಹರು ಮನೆತನಕ್ಕೆ ಕುಟುಂಬ ರಾಜಕಾರಣ ಅಂತಾರೆ ಎಂದು ತಿಳಿಸಿದರು.

ನಾನು ಎಬಿವಿಪಿಯಿಂದ ಬಂದು ಸಂಸದನಾಗಿದ್ದೇನೆ ಯಾವುದೋ ಒತ್ತಡಕ್ಕಾಗಿ ನನಗೆ ಪಕ್ಷ ಟಿಕೆಟ್ ನೀಡಿಲ್ಲ ಜನರ ವಿಶ್ವಾಸ ಗಳಿಸಿದ್ದೇನೆ, ಪ್ರಾಮಾಣಿಕ ಕೆಲಸ ಮಾಡಿದ್ದೇನೆ ಬಿ ಎಸ್ ವೈ ಚುನಾವಣೆ ರಾಜಕೀಯದಿಂದ ನಿವೃತ್ತರಾಗಿದ್ದಾರೆ ಎಂದು ತಿಳಿಸಿದ ಸಂಸದರು, ಮಕ್ಕಳು ಹೊರಗಡೆ ಹೋದಾಗ ತಾಯಂದಿರು ದೃಷ್ಠಿ ತೆಗೆಯುತ್ತಾರೆ ನಾನು ಸಹ ದೃಷ್ಠಿ ತೆಗೆಸಿಕೊಂಡು ಹೋಗಲು ದುರ್ಗದ ಮಠಗಳಿಗೆ ಬಂದಿದ್ದೇನೆ ಮಠಗಳ ಭೇಟಿ ತಾಯಿ, ತಂದೆಯ ಮಾರ್ಗದರ್ಶನದಿಂದ ಕಲಿತಿದ್ದೇನೆ ಎಂದು ರಾಘವೇಂದ್ರ ಹೇಳಿದರು.

ಈ ಸಂದರ್ಭದಲ್ಲಿ ಶಾಸಕರಾದ ಎಂ.ಚಂದ್ರಪ್ಪ, ಬಿಜೆಪಿಯ ವಕ್ತಾರ ದಗ್ಗೆ ಶಿವಪ್ರಕಾಶ್, ನಗರಾಧ್ಯಕ್ಷ ನವೀನ ಚಾಲುಕ್ಯ ನಗರ ಕಾರ್ಯದರ್ಶಿ ಕಿರಣ ಕುಮಾರ್ ತಿಮ್ಮಣ್ಣ, ಯುವ ಮೋರ್ಚಾ ಚಂದ್ರು ವಿವಿಧ ಸಮುದಾಯದ ಮುಖಂಡರು ಭಾಗವಹಿಸಿದ್ದರು,

# ಬಿಇಡಿ ಶಿಕ್ಷಣದ ಜೊತೆ ಕೌಶಲ್ಯ ಪ್ರತಿಭೆಯಿರಬೇಕು

» **ಚಿತ್ರದುರ್ಗ**



ಬಿ.ಇ.ಡಿ. ಶಿಕ್ಷಣದ ಜೊತೆ ಕೌಶಲ್ಯ, ಪ್ರತಿಭೆಯಿರಬೇಕೆಂದು ದಾವಣಗೆರೆ ವಿಶ್ವವಿದ್ಯಾನಿಲಯದ ಪ್ರಭಾರಿ ಕುಲ ಸಚಿವರಾದ ಡಾ.ವೆಂಕಟರಾವ್ ಪಲಾಟೆ ಪ್ರಶಿಕ್ಷಣಾರ್ಥಿಗಳಿಗೆ ತಿಳಿಸಿದರು.

ಕೋಟೆ ರಸ್ತೆಯಲ್ಲಿರುವ ರಾಘವೇಂದ್ರ ಶಿಕ್ಷಣ ಮಹಾವಿದ್ಯಾಲಯ ಬಿ.ಇ.ಡಿ. ಕಾಲೇಜಿನಲ್ಲಿ ಶುಕ್ರವಾರ ನಡೆದ 2023–24 ನೇ ಸಾಲಿನ ವಿದ್ಯಾರ್ಥಿ ಸಂಘದ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ, ಸ್ವಾಗತ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಒಳ್ಳೆಯ ಶಿಕ್ಷಕರು ದೇಶದ ಆಸ್ತಿ. ಬಿ.ಇ.ಡಿ. ಮುಗಿಸಿದವರಿಗೆ ಆತ್ಮವಿಶ್ವಾಸವಿರಬೇಕು. ಎಲ್ಲರಿಗೂ ಸರ್ಕಾರಿ ಉದ್ಯೋಗ ಸಿಗುವುದು ಕಷ್ಟ. ಆದರೆ ಕೌಶಲ್ಯಾಧಾರಿತ ಶಿಕ್ಷಣ ಕೊಡುವುದು ಶಿಕ್ಷಣ ಸಂಸ್ಥೆ ಹಾಗೂ ಸರ್ಕಾರದ ಕೆಲಸ. ವೇದಗಳ ಕಾಲದಿಂದಲೂ ಪರಿಪೂರ್ಣ ಶಿಕ್ಷಣಕ್ಕೆಬೇರೆಬೇರೆವ್ಯಾಖ್ಯಾನಗಳಿವೆ. ಆಧುನಿಕ ಶಿಕ್ಷಣ ಸಿಕ್ಕಿದ್ದು, ಬ್ರಿಟೀಷರ ಆಡಳಿತದ ನಂತರ. ಜಾತಿ ಪದ್ದತಿ, ಸತಿ ಸಹಗಮನ ಪದ್ದತಿ ನಿಕೃಷ್ಟ ಕೆಟ್ಟ ಆಚರಣೆ. ಭಾರತದ ಶಿಕ್ಷಣದ ತಳಹದಿ ಜಗತ್ತಿಗೆ ಮಾದರಿಯಾಗಿದೆ ಎಂದು ಹೇಳಿದರು.

ಇಡಿ ಜಗತ್ತಿನ ಎಲ್ಲಾ ಭಾಷೆಗಳು ಇಂಗ್ಲಿಷ್‌ನಲ್ಲಿದೆ. ಭಾವನೆಗಳನ್ನು ಹಂಚಿಕೊಳ್ಳಲು ಮಾತೃಭಾಷೆಗಳು ಬೇಕು. ಅನಿವಾರ್ಯವಾಗಿ ಇಂಗ್ಲಿಷ್ ಬೇಕು. ಮಕ್ಕಳ ಮನಸ್ಸಿಗೆ ನಾಟುವ ರೀತಿಯಲ್ಲಿ ಪಾಠ ಮಾಡುವ ಕೌಶಲ್ಯವಿದ್ದಾಗ ಪರಿಪೂರ್ಣ ಶಿಕ್ಷಕರಾಗುತ್ತೀರಿ. ಪ್ರಶಿಕ್ಷಣಾರ್ಥಿಗಳಾದ ನೀವುಗಳು ಶ್ರಮ ಸಂಸ್ಕೃತಿಗೆ ಸೇರಬೇಕು. ಸ್ವಂತಿಕೆ, ಆತ್ಮಸ್ಥೈರ್ಯವಿದ್ದಾಗ ಮಾತ್ರ ನಿಮ್ಮ ಜೀವನವನ್ನು ನೀವುಗಳೆ ರೂಪಿಸಿಕೊಳ್ಳಬಹುದು ಎಂದರು.

ದಾವಣಗೆರೆ ವಿಶ್ವವಿದ್ಯಾನಿಲಯ ನಿಕಾಯ ಶಿಕ್ಷಣ ಮುಖ್ಯಸ್ಥರಾದ ಡಾ.ಕೆ.ವೆಂಕಟೇಶ್ ಮಾತನಾಡಿ ಕರ್ತವ್ಯಕ್ಕೆ ತಲೆಬಾಗಿದರೆ ನೀವುಗಳು ಯಾರಿಗೂ ತಲೆಬಾಗುವುದು ಬೇಡ. ಬಿ.ಇ.ಡಿ. ಮುಗಿಸಿದ ನಂತರ ಉತ್ತಮ ಶಿಕ್ಷಕನಾಗಲು ತರಬೇತಿ ಮುಖ್ಯ. ಪ್ರಶಿಕ್ಷಣಾರ್ಥಿಗಳ ಭಯ ಹೋಗಲಾಡಿಸುವುದಕ್ಕಾಗಿಯೇ ಬಿ.ಇ.ಡಿ. ವಿದ್ಯಾರ್ಥಿಗಳಿಗೆ ಮೈಕ್ರೋ ಟೀಚಿಂಗ್ ನೀಡಲಾಗುವುದು. ನೀವುಗಳು ಶಿಕ್ಷಕರುಗಳಾದ ಮೇಲೆ ಹತ್ತು ಹಲವಾರು ಸಮಸ್ಯೆ, ಸವಾಲುಗಳನ್ನು ಮೆಟ್ಟಿ ನಿಲ್ಲಬೇಕು. ಪ್ರಶಿಕ್ಷಣಾರ್ಥಿಗಳಾದ ನೀವುಗಳು ಶ್ರಮ ಹಾಕಬೇಕು. ಆಗ ಮಾತ್ರ ಮಕ್ಕಳ ಮನಸ್ಸಿನಲ್ಲಿ ಅಡಗಿರುವ ಪ್ರತಿಭೆಯನ್ನು ಹೊರತೆಗೆಯಬಹುದು ಎಂದು ತಿಳಿಸಿದರು. ಐ.ಡಿ.ಬಿ.ಐ. ಬ್ಯಾಂಕ್ ವ್ಯವಸ್ಥಾಪಕ ಪ್ರಸನ್ನಕುಮಾರ್ ಎಂ.ಎಸ್. ಮಾತನಾಡುತ್ತ ಆರ್ಥಿಕವಾಗಿ ಸ್ವತಂತ್ರವಾಗಿರಬೇಕು. ಹಣ ಗಳಿಸುವುದು ಎಷ್ಟು ಮುಖ್ಯವೋ ಅದನ್ನು ಹೇಗೆ ಉಳಿತಾಯ ಮಾಡಬೇಕೆನ್ನುವುದು ಕೂಡ ಅಷ್ಟೆ ಮುಖ್ಯ ಎಂದರು.

ದುಡಿಯುವ ವ್ಯಕ್ತಿಗೆ ಜೀವ ವಿಮೆ ಇರಬೇಕು. ಏಕೆಂದರೆ ಯಾವ ಸಂದರ್ಭದಲ್ಲಿ ಮನುಷ್ಯನ ಆರೋಗ್ಯ ಕೈಕೊಡುತ್ತದೆ ಎನ್ನುವುದು ಗೊತ್ತಿಲ್ಲ. ಆಗ ಇಡಿ ಕುಟುಂಬವೇ ಪರಿತಪಿಸಬೇಕಾಗುತ್ತದೆ. ಅನಾವಶ್ಯಕವಾಗಿ ಸಾಲ ಮಾಡಿ ಜೀವನವಿಡಿ ಬಡ್ಡಿ ಕಟ್ಟುವಂತಾಗಬಾರದು. ಇದ್ದುದರಲ್ಲಿಯೇ ತೃಪ್ತಿಪಡುವುದು ಒಳ್ಳೆಯದು ಎಂದು ತಿಳಿಸಿದರು.

ರಾಘವೇಂದ್ರ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಹೆಚ್.ರಾಮಮೂರ್ತಿ ಅಧ್ಯಕ್ಷತೆ ವಹಿಸಿದ್ದರು. ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಡಾ.ಕೆ.ಎಂ.ವೀರೇಶ್, ಸೀಡ್ ವಿದ್ಯಾಸಂಸ್ಥೆ ಕಾರ್ಯದರ್ಶಿ ಹೆಚ್.ಶ್ರೀನಿವಾಸ್, ರಾಘವೇಂದ್ರ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಶ್ರೀಮತಿ ಕೆ.ಶಾರದಮ್ಮ, ಪ್ರಾಚಾರ್ಯರಾದ ಡಾ.ಬಸವರಾಜಪ್ಪ ಎ.ಜಿ. ಶ್ರೀಮತಿ ಹೇಮಾವತಿ ವೇದಿಕೆಯಲ್ಲಿದ್ದರು.

# ಪ್ರತಿ ನೀರಿನ ಹನಿಯನ್ನು ತೀರ್ಥದಂತೆ ಉಪಯೋಗಿಸಿ ಶಿವಣ್ಣ ಸಲಹೆ"



» **ಹೊಸದುರ್ಗ**

ಭೂಮಿಯ ಮೇಲೆ ಜೀವಿಸುವ ಪ್ರತಿಯೊಬ್ಬ ಮಾನವರು ನೀರನ್ನು ತೀರ್ಥದಂತೆ ಹಿತವಾಗಿ ಮತ್ತು ಮಿತವಾಗಿ ಬಳಸುವುದರ ಮೂಲಕ ಜಲವನ್ನ ಸಂರಕ್ಷಿಸಬೇಕಾಗಿದೆ ಮತ್ತು ನೀರುಳಿಸುವ ಸ್ವ–ಅಭಿಯಾನ ಮಾಡಬೇಕಾಗಿದ್ದು ನಮ್ಮೆಲರ ಜವಾಬ್ದಾರಿಯಾಗಿದೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಹೊಸದುರ್ಗ ಯೋಜನಾಧಿಕಾರಿ ಶಿವಣ್ಣ ಎಸ್ ತಿಳಿಸಿದರು ,

ನಗರದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾ ಕಛೇರಿ ಸಭಾಂಗಣದಲ್ಲಿ ನಡೆದ ವಿಶ್ವಜಲ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ತಾಲ್ಲೂಕಿನಲ್ಲಿ ಜಲಸಂರಕ್ಷಣೆಯ ಅಭಿಯಾನವನ್ನು 600 ಕಾರ್ಯಕರ್ತರು ಕೈಗೊಳ್ಳುತ್ತಿದ್ದು 1 ತಿಂಗಳ ಕಾಲ ಪ್ರತಿಯೊಬ್ಬ ಸದಸ್ಯರು ಹಾಗೂ ಸಾರ್ವಜನಿಕರಿಗೆ ನೀರು ಉಳಿಸುವ ಆಪ್ ಅನ್ನು ಡೌನ್ಲೋಡ್ ಮಾಡಿಸಿ ಸೂಕ್ತ ಮಾಹಿತಿ ಕೊಡಲಾಗುತ್ತದೆ.ಈ ಅಭಿಯಾನಕ್ಕೆ ಸಾರ್ವಜನಿಕರು ಕೈಜೋಡಿಸಬೇಕು ಎಂದರು. ಇದೇ ಸಂದರ್ಭದಲ್ಲಿ ಅತೀ ಹೆಚ್ಚು ನೀರು ಸಂರಕ್ಷಿಸಿ ಅಭಿಯಾನದಲ್ಲಿ ಗುರುತಿಸುವ ಸಿಬ್ಬಂದಿಗಳಿಗೆ ಗೌರವಿಸಲಾಯಿತು

ಕಾರ್ಯಕ್ರಮದಲ್ಲಿ ಪ್ರಬಂಧಕರಾದ ಚಿಕ್ಕನಾಗಪ್ಪ , ಸಹಾಯಕ ಪ್ರಬಂಧಕರಾದ ಪ್ರತಿಭಾ, ನೋಡೆಲ್ ಅಧಿಕಾರಿ ಮತ್ತು ಕಾರ್ಯಕರ್ತರು ಹಾಜರಿದ್ದರು .

## ಪ್ರಮುಖ ಸುದ್ದಿ

# ಗ್ರಾಹಕರಿಗೆ ಗ್ರಾಹಕ ಸಂರಕ್ಷಣಾ ಹಕ್ಕುಗಳೊಂದಿಗೆ ಜವಾಬ್ದಾರಿಗಳ ಜಾಗೃತಿ ಮೂಡಿಸುವುದು ಅಗತ್ಯ; ಜಿಲ್ಲಾಧಿಕಾರಿ ಡಾ.ವೆಂಕಟೇಶ್

» **ದಾವಣಗೆರೆ**



ಸರಕು ಮತ್ತು ಸೇವೆಗಳ ಸೇವಾ ನ್ಯೂನ್ಯತೆ ವಿರುದ್ಧ ರಕ್ಷಣೆ ಪಡೆಯುವ ಹಕ್ಕುಗಳು ಮತ್ತು ಅನ್ಯಾಯದ ವ್ಯಾಪಾರ ಪದ್ಧತಿಗಳಿಂದ ಗ್ರಾಹಕರನ್ನು ರಕ್ಷಿಸಲು ಸರಕು ಮತ್ತು ಸೇವೆಯ ಗುಣಮಟ್ಟ, ಪ್ರಮಾಣ ಮತ್ತು ದರ ಕುರಿತು ಪ್ರಶ್ನಿಸಲು ಪ್ರತಿಯೊಬ್ಬ ಗ್ರಾಹಕರು ಸಂರಕ್ಷಣಾ ಹಕ್ಕುಗಳ ಬಗ್ಗೆ ತಿಳಿಯಬೇಕು ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ತಿಳಿಸಿದರು. ಅವರು ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವಾಣಿಜ್ಯಗಳ ಪರಿಹಾರ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ, ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರ, ಯು.ಬಿ.ಡಿ.ಟಿ ಇಂಜಿನಿಯರಿಂಗ್ ಕಾಲೇಜ್, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಹಕರಿಗೆ ಸರಕು, ಸೇವೆಗಳ ಬಗ್ಗೆ ಜಾಗೃತಿ ಇರಬೇಕು. ಗ್ರಾಹಕರು ಸರಕುಗಳನ್ನು ಒದಗಿಸುವ ಮಾರಾಟಗಾರ ಬಳಿ ಬಂದಾಗ ಆಯಾ ವಸ್ತುಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆಯುವ ಹಕ್ಕು ಹೊಂದಿರುತ್ತಾನೆ. ವ್ಯಾಪಾರದಾರರಿಂದ ಗ್ರಾಹಕರಿಗೆ ಒದಗಿಸಿದ ಸರಕುಗಳು ಗುಣಮಟ್ಟಕ್ಕೆ ಅನುಗುಣವಾಗಿಲ್ಲದಿದ್ದರೆ, ಖರೀದಿಸಿದ ವಸ್ತುಗಳ ಸಂಪೂರ್ಣ ದಾಖಲೆಗಳನ್ನಿಟ್ಟುಕೊಂಡು ಗ್ರಾಹಕರ ನ್ಯಾಯಾಲಯದಲ್ಲಿ ಪ್ರಶ್ನಿಸಬಹುದಾಗಿದೆ. ಯಾವುದೇ ವಸ್ತುಗಳು ಕಳಪೆಯಿಂದ ಕೂಡಿವೆ, ಸೇವಾ ನ್ಯೂನ್ಯತೆ ಹೊಂದಿದೆ ಎಂದಲ್ಲಿ ಅದನ್ನು ಗ್ರಾಹಕರ ನ್ಯಾಯಾಲದಲ್ಲಿ ಪ್ರಶ್ನಿಸುವ ಪ್ರವೃತ್ತಿಯನ್ನು ಪ್ರತಿಯೊಬ್ಬ ಗ್ರಾಹಕರು ಬೆಳೆಸಿಕೊಳ್ಳಬೇಕು.

ಯಾವುದೇ ವಸ್ತುಗಳನ್ನು ಖರೀದಿಸಿ ಅದಕ್ಕೆ ಸಂಬಂಧಿಸಿದ ಬಿಲ್‌ನ್ನು ಪಡೆದುಕೊಳ್ಳಬೇಕು. ಬಿಲ್ ಪಡೆದಾಗ ಮಾತ್ರ ನಾವು ಕಳಪೆ, ಸೇವಾ ನ್ಯೂನ್ಯತೆಯ ವಿರುದ್ಧ ಹೋರಾಟ ಮಾಡಿ ಅದರಿಂದಾದ ನಷ್ಟಕ್ಕೆ ಪರಿಹಾರ ಪಡೆದುಕೊಳ್ಳಬಹುದಾಗಿದೆ ಎಂದರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಮಹಾಂತೇಶ್ ಈರಪ್ಪ ಶಿಗ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿ. ದೈನಂದಿನ ಜೀವನದಲ್ಲಿ ಪ್ರತಿಯೊಬ್ಬರೂ ಗ್ರಾಹಕರೇ. ಗ್ರಾಹಕರಿಗೆ ನ್ಯಾಯಯುತ, ಯೋಗ್ಯ ಹಾಗೂ ಗುಣಮಟ್ಟದ ಸರಕು ಮತ್ತು ಸೇವೆಗಳನ್ನು ನೀಡುವ ಜವಾಬ್ದಾರಿ ವ್ಯಾಪಾರಸ್ಥರದ್ದು, ಯಾವುದೇ ವಸ್ತುಗಳನ್ನು ಕೊಡುವವನ ತೃಪ್ತಿಗಾಗಿ ಕೊಳ್ಳುವುದಲ್ಲ. ಅಲ್ಲಿ ಗ್ರಾಹಕರ ಸಂತೃಪ್ತಿಯೇ ಮುಖ್ಯ,

ಸುರಕ್ಷತೆ, ಆಯ್ಕೆ ಹಾಗೂ ಆರೋಗ್ಯಪೂರ್ಣ ಪರಿಸರ ಹೊಂದುವ ಹಕ್ಕನ್ನು ಗ್ರಾಹಕರ ಸಂರಕ್ಷಣಾ ಕಾಯ್ದೆಯು ಎಲ್ಲ ಗ್ರಾಹಕರಿಗೂ ನೀಡಿದೆ ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಮ. ಕೆರೆಣ್ಣ ಮಾತನಾಡಿ ವ್ಯಾಪಾರಸ್ಥರು ವಸ್ತುಗಳಿಗೆ ನಿಗದಿತ ಬೆಲೆಗಿಂತ ಹೆಚ್ಚಿನ ದರ ಪಡೆಯುವಂತಿಲ್ಲ. ವಸ್ತುಗಳು ದೋಷದಿಂದ ಕೂಡಿದ್ದರೆ ಪ್ರಶ್ನೆ ಮಾಡುವ ಹಕ್ಕು ಗ್ರಾಹಕರಿಗಿದೆ. ಅವಧಿ ಮೀರಿದ ಉತ್ಪನ್ನಗಳನ್ನು ನೀಡಿದರೆ ಅಂತಹವರ ಮೇಲೆ ಗ್ರಾಹಕರ ಆಯೋಗದಲ್ಲಿ ಪ್ರಕರಣ ದಾಖಲಿಸಿ ಪರಿಹಾರ ಪಡೆಯಬಹುದು. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಗ್ರಾಹಕರು ತಮ್ಮ ಹಕ್ಕುಗಳನ್ನು ಅರಿಯಬೇಕು ಎಂದರು.

ಆಹಾರ ಇಲಾಖೆ ಉಪ ನಿರ್ದೇಶಕ ಸಿದ್ದರಾಮ್ ಮಾರಿಹಾಳ್ ಸ್ವಾಗತಿಸಿದರು. ಯುಬಿಡಿಟಿ ಕಾಲೇಜಿನ ಪ್ರಾಧ್ಯಾಪಕರಾದ ಮೊಹಮದ್ ರಫೀ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಗ್ರಾಹಕರ ವಾಣಿಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಸಿ ಎಸ್ ತ್ಯಾಗರಾಜನ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಬಿ.ವಿ ಗೀತಾ, ಯುಬಿಡಿಟಿ ಎಂಜಿನಿಯರಿಂಗ್ ಕಾಲೇಜ್ ಪ್ರಾಂಶುಪಾಲರಾದ ಡಾ;ಡಿ.ಪಿ.ನಾಗರಾಜಪ್ಪ, ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ಸಂಘದ ಡೀನ್ ಮಂಜನಾಯಕ್ ಎನ್, ಡಿ ಸಿ ಐ ಸಿ ಅಧ್ಯಕ್ಷರಾದ ಅನಿತಾ ಹೆಚ್, ಆಹಾರ ಇಲಾಖೆಯ ಸಹ ನಿರ್ದೇಶಕ ಶಿವಾಜಿ ಟಿ, ಆಹಾರ ನಿರೀಕ್ಷಕರು ಮಂಜುನಾಥ ಇನ್ನಿತರರು ಉಪಸ್ಥಿತರಿದ್ದರು

## ಫಾಸ್ಟ್ ನ್ಯೂಸ್

### ಲೋಕಸಭಾ ಚುನಾವಣೆಯಲ್ಲಿ ಕೆಪಿಸಿಸಿಗೆ ಮೇಜರ್ ಸರ್ಜರಿ: ನೂತನ ಐವರು ಕಾರ್ಯಾಧ್ಯಕ್ಷರ ನೇಮಕ

» **ಬೆಂಗಳೂರು**

ಲೋಕಸಭೆ ಚುನಾವಣೆಗೆ ಕೌಂಟ್‌ಡೌನ್ ಶುರುವಾಗಿದೆ. ಈಗಾಗಲೇ ಮತದಾನದ ದಿನಾಂಕವನ್ನು ಸಹ ಕೇಂದ್ರ ಚುನಾವಣಾ ಆಯೋಗ ಘೋಷಣೆ ಮಾಡಿದೆ. ರಾಜ್ಯದಲ್ಲಿ ಚುನಾವಣಾ ಕಾವು ಜಾಸ್ತಿ ಆಗುತ್ತಿದ್ದು, ಇದರ ಮಧ್ಯೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಯಲ್ಲಿ ಮೇಜರ್ ಸರ್ಜರಿ ಮಾಡಲಾಗಿದೆ. ಲೋಕಸಭಾ ಚುನಾವಣೆ ಹೊತ್ತಲ್ಲಿ ಐವರು ನೂತನ ಕಾರ್ಯಾಧ್ಯಕ್ಷರನ್ನು ಆಲ್ ಇಂಡಿಯಾ ಕಾಂಗ್ರೆಸ್ ಕಮಿಟಿ (ಎಐಸಿಸಿ) ನೇಮಕ ಮಾಡಿ ಶನಿವಾರ ಆದೇಶ ಹೊರಡಿಸಿದೆ. **ಯಾರೆಲ್ಲ ನೇಮಕ:** ಕೆಪಿಸಿಸಿ ನೂತನ ಕಾರ್ಯಾಧ್ಯಕ್ಷರಾಗಿ ತನ್ವೀರ್ ಸೇಠ್, ಜಿ.ಸಿ.ಚಂದ್ರಶೇಖರ್, ವಿನಯ್ ಕುಲಕರ್ಣಿ, ಮಂಜುನಾಥ್ ಭಂಡಾರಿ, ವಸಂತ್ ಕುಮಾರ್ ನೇಮಕ. ಪ್ರಚಾರ ಸಮಿತಿ ಅಧ್ಯಕ್ಷರಾಗಿ ವಿನಯ್ ಕುಮಾರ್ ಸೊರಕೆ ನೇಮಕ. ಪ್ರಚಾರ ಸಮಿತಿ ಕೋ ಚೇರ್ಮನ್ ಆಗಿ ಎಲ್. ಹನುಮಂತಯ್ಯ ನೇಮಕ. ಕೆಪಿಸಿಸಿ ಪ್ರಚಾರ ಸಮಿತಿ ಉಪಾಧ್ಯಕ್ಷರಾಗಿ ರಿಜ್ವಾನ್ ಅರ್ಷದ್ ನೇಮಕ ಸಿದ್ದರಾಮಯ್ಯ, ಶಿವಕುಮಾರ್ ನೇತೃತ್ವದಲ್ಲಿ ಸಭೆ : 14 ಕ್ಷೇತ್ರಗಳ ಬಗ್ಗೆ ತಂತ್ರಗಾರಿಕೆ ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಕೆಪಿಸಿಸಿ ಕಚೇರಿಯಲ್ಲಿ ಮೀಟಿಂಗ್ ಮಾಡಲಾಗಿದೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಸಭೆ ಮಾಡಲಾಗಿದ್ದು, ಸಚಿವರಾದ ಕೆ.ಜೆ.ಜಾರ್ಜ್, ಕೆ.ಹೆಚ್.ಮುನಿಯಪ್ಪ, ದಿನೇಶ್ ಗುಂಡೂರಾವ್ , ಕೃಷ್ಣ ಭೈರೇಗೌಡ, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಸಲೀಂ ಅಹ್ಮದ್, ಚಂದ್ರಪ್ಪ, ರಾಜ್ಯಸಭೆ ಸದಸ್ಯ ಜಿ.ಸಿ.ಚಂದ್ರಶೇಖರ್, ವಿಧಾನಪರಿಷತ್ ಸದಸ್ಯರು. ಮೊದಲ ಹಂತದಲ್ಲಿ ಚುನಾವಣೆ ನಡೆಯುವ 14 ಕ್ಷೇತ್ರಗಳ ವ್ಯಾಪ್ತಿಯ ಶಾಸಕರು, ಮಾಜಿ ಶಾಸಕರು, 14 ಕ್ಷೇತ್ರಗಳ ವ್ಯಾಪ್ತಿಯ ಕಾಂಗ್ರೆಸ್ ಜಿಲ್ಲಾಧ್ಯಕ್ಷರು ಭಾಗಿಯಾಗಿದ್ದು, ಮೊದಲ ಹಂತದಲ್ಲಿ ಚುನಾವಣೆ ನಡೆಯುವ 14 ಕ್ಷೇತ್ರಗಳ ಬಗ್ಗೆ ತಂತ್ರಗಾರಿಕೆ ರೂಪಿಸಲಾಗಿದೆ ಎನ್ನಲಾಗುತ್ತಿದೆ.

### ಹೊಳಲ್ಕೆರೆ: ವಿಶ್ವ ಜಲ ದಿನಾಚರಣೆ ಆಚರಣೆ

» **ಹೊಳಲ್ಕೆರೆ**

ಜೀವಸಂಕುಲಕ್ಕೆ ನೀರು ಜೀವ ಜಲವಾಗಿದ್ದು ನೀರನ್ನ ಸಂರಕ್ಷಣೆ ಮಾಡುವ ಮೂಲಕ ಪರಿಸರವನ್ನು ಕಾಪಾಡಬೇಕೆಂದು ನ್ಯಾಯಾಧೀಶರಾದ ಎಂಪಿ ಉಮೇಶ್ ತಿಳಿಸಿದರು. ಅವರು ಹೊಳಲ್ಕೆರೆ ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ವಿಶ್ವ ಜಲ ದಿನಾಚರಣೆ ಅಂಗವಾಗಿ ನ್ಯಾಯಾಲಯದ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ವಿಶ್ವ ಜಲ ಜಲ ದಿನಾಚರಣೆ ಅಂಗವಾಗಿ ನ್ಯಾಯಾಲಯದ ವತಿಯಿಂದ ನೀರನ್ನ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ನೀರು ಜೀವ ಜಲ. ಅಮೂಲ್ಯವಾದ ವಸ್ತು. ಪರಿಸರದಲ್ಲಿರುವ ಪ್ರತಿಯೊಂದು ಪ್ರಾಣಿ ಪಕ್ಷಿಗಳಿಗೂ ನೀರಿನ ಅಗತ್ಯತೆ ಇದೆ. ಕೃಷಿ ಪರಿಸರ ಮನುಷ್ಯನ ಪ್ರಾಣಿ ಪಕ್ಷಿಗಳ ಜೀವನಾಡಿಯಾಗಿದ್ದು ನೀರನ್ನು ಸಂರಕ್ಷಣೆ ಮಾಡಲು ಹೆಚ್ಚು ಹೊತ್ತು ನೀಡಬೇಕು. ನೀರಿನ ಸಂರಕ್ಷಣೆಗೆ ಬೇಕಾದ ಪರಿಸರವನ್ನ ನಿರ್ಮಾಣ ಮಾಡಬೇಕೆಂದರು.ಅಪರ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶರಾದ ಅನುಪಮಾ ರೇಣುಕಪ್ಪ ಡಂಗ ಮಾತನಾಡಿ. ಪರಿಸರದಲ್ಲಿರುವ ಬಹುಮುಖ್ಯ ಸಂಪನ್ಮೂಲ ನೀರು. ನೀರು ಇಲ್ಲದೆ ಜೀವ ಸಂಕುಲ ಬದುಕಲು ಸಾಧ್ಯವಿಲ್ಲ. ವಿಶ್ವದಲ್ಲಿ ಕುಡಿಯುವ ನೀರಿನ ಕೊರತೆ ಇದೆ. ವಿಶ್ವದ ಬಹುತೇಕ ಭಾಗ ಸಮುದ್ರ ಸಾಗರಗಳು ಆವರಿಸಿಕೊಂಡಿದ್ದರು ಸಿಹಿ ನೀರಿನ ಕೊರತೆ ವಿಶ್ವವನ್ನು ಕಾಡುತ್ತಿದೆ ಹಾಗಾಗಿ ಜಲಾಶಯಗಳು ಕೆರೆಕಟ್ಟೆಗಳು ಹೊಂಡಗಳು ನೀರಿನ ಜರಿಗಳನ್ನು ಸಂರಕ್ಷಣೆ ಮಾಡಬೇಕು ಅಂತರ್ಜಲ ಅಭಿವೃದ್ಧಿಗೆ ಒತ್ತು ನೀಡಬೇಕೆಂದರು ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ಎಲ್ ಕೆ ಶಿವಕುಮಾರ್, ಉಪಾಧ್ಯಕ್ಷ ಎಚ್. ರಮೇಶ್ ಕಾರ್ಯದರ್ಶಿ ಸಿದ್ದೇಶ್ ಸರ್ಕಾರಿ ಅಭಿಯೋಜಕ ಶ್ರೀರಂಗ ಗುಲಕರ್ಣಿ ಸೇರಿದಂತೆ ವಕೀಲರು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

### ಅಬಕಾರಿ ಪೊಲೀಸ್ ದಾಳಿ: ಮದ್ಯ ವಶ

» **ಬಳ್ಳಾರಿ**

ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ನೀತಿ ಸಂಹಿತೆ ಜಾರಿಯಾಗಿರುವುದರಿಂದ, ಬುಧವಾರದಂದು ಅಬಕಾರಿ ಪೊಲೀಸ್ ಅಧಿಕಾರಿಗಳು ವಿವಿಧೆಡೆ ದಾಳಿ ನಡೆಸಿ ಅಕ್ರಮ ಮದ್ಯ ಸಾಗಾಣಿಕೆ ಮಾಡುತ್ತಿದ್ದ ಇಬ್ಬರು ವ್ಯಕ್ತಿಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ ಎಂದು ಅಬಕಾರಿ ಉಪ ಆಯುಕ್ತ ಎನ್.ಮಂಜುನಾಥ ಅವರು ತಿಳಿಸಿದ್ದಾರೆ. ಕುರುಗೋಡು ತಾಲ್ಲೂಕಿನ ಬಳ್ಳಾರಿ-ಸಿರುಗುಪ್ಪ ಮುಖ್ಯ ರಸ್ತೆಯ ಸೋಮಸಮುದ್ರ ಕ್ರಾಸ್‌ನಲ್ಲಿ ರಸ್ತೆಗಾವಲು ಸಮಯದಲ್ಲಿ ನೋಂದಣಿ ಸಂಖ್ಯೆ ಇಲ್ಲದ ಕಂದು ಬಣ್ಣದ ಟಿವಿಎಸ್ ಎಕ್ಸ್‌ಎಲ್ 100 ಹೆವಿಡ್ಯೂಟಿ ದ್ವಿಚಕ್ರ ವಾಹನದಲ್ಲಿ 38.160 ಲೀ ಮದ್ಯ ಹಾಗೂ 15.600 ಲೀ ಬಿಯರ್ (ಅಂದಾಜು ಮೌಲ್ಯ ರೂ.40940) ಅನ್ನು ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆಹಚ್ಚಿ, ವಾಹನ ಸಾವರನನ್ನು ವಶಕ್ಕೆ ಪಡೆದುಕೊಂಡು ಮದ್ಯ, ಬಿಯರ್ ಹಾಗೂ ವಾಹನವನ್ನು ಜಪ್ತುಪಡಿಸಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ

### ರಾಷ್ಟ್ರೀಯ ಪಕ್ಷಗಳಿಗೆ ಸಂದೇಶ ರವಾನಿಸಿದ ಇಮ್ಮಡಿ ಸಿದ್ದರಾಮೇಶ್ವರ ಶ್ರೀ

# ಇನ್ನೂ ಸಮಯವಿದೆ ಆಲೋಚಿಸಿ: ಸ್ವಾಮೀಜಿ

» **ಚಿತ್ರದುರ್ಗ**



ಭೋವಿ, ಬಂಜಾರ, ಕೊರಮ, ಕೊರಚ ಸಮುದಾಯಗಳನ್ನು ಚುನಾವಣೆಯಲ್ಲಿ ನಿರ್ಲಕ್ಷ್ಯ ಮಾಡಿದರೆ ಸೋಲು ಖಚಿತ ಎಂಬುದು ಈಗಾಗಲೇ ಸಾಭೀತಾಗಿದೆ. ಈ ಸತ್ಯವನ್ನು ಅರ್ಥ ಮಾಡಿಕೊಂಡು ಭೋವಿ ಸಮುದಾಯಕ್ಕೆ ಟಿಕೆಟ್ ನೀಡಬೇಕು. ಇಲ್ಲವಾದರೆ ನಮ್ಮ ನಡೆ ಪ್ರಕಟಿಸಲಾಗುತ್ತದೆ ಎಂದು ಭೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಎಚ್ಚರಿಸಿದರು.

ನಗರದ ಹೊರವಲಯದ ಭೋವಿ ಮಠದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬಿಜೆಪಿ ದಕ್ಷಿಣ ಭಾರತದಲ್ಲಿ ಗಟ್ಟಿಯಾಗಿ ನೆಲೆಯೂರಲು ಭೋವಿ ಸಮಾಜದ ಕೊಡುಗೆ ಅಪಾರವಾಗಿದೆ. ಈ ನಿಟ್ಟಿನಲ್ಲಿ ಚಿತ್ರದುರ್ಗ ಹಾಗೂ ಕೋಲಾರ ಕ್ಷೇತ್ರದಲ್ಲಿ ಸಮುದಾಯಕ್ಕೆ ಟಿಕೆಟ್ ನೀಡಬೇಕು' ಎಂದು ಆಗ್ರಹಿಸಿದರು.

ದೇಶದ ಎರಡು ರಾಷ್ಟ್ರೀಯ ಪಕ್ಷಗಳು ಚಿತ್ರದುರ್ಗ, ಕೋಲಾರ ಸೇರಿದಂತೆ ರಾಜ್ಯದ 5 ಲೋಕಸಭಾ ಕ್ಷೇತ್ರಗಳಲ್ಲಿ ಭೋವಿ ಸಮುದಾಯದ ವ್ಯಕ್ತಿಗಳಿಗೆ ಟಿಕೆಟ್ ನೀಡಿಲ್ಲ. ನಮ್ಮ ಮುಖಂಡರಿಗೆ ಟಿಕೆಟ್ ನೀಡಬೇಕು ಇಲ್ಲವಾದರೆ ಸಮುದಾಯದ ಮುಂದಿನ ನಡೆ ಎರಡು ಪಕ್ಷಗಳ ಮೇಲೆ ಪರಿಣಾಮ ಬಿರುವುದು ಖಚಿತ ಎಂದರು.

ಭಾರತ ಜಾತ್ಯಾತೀತ ದೇಶ. ಭಾರತೀಯರಿಗೆ ಸಂವಿಧಾನವೇ ಮೂಲ ಗ್ರಂಥವಾಗಿದೆ. ಇಲ್ಲಿನ ಪ್ರಜೆ ಸಾಮಾಜಿಕ, ಶೈಕ್ಷಣಿಕ ಧಾರ್ಮಿಕ ಹಾಗೂ ಆರ್ಥಿಕವಾಗಿ ಸಬಲರಾದಾಗ ಮಾತ್ರ ಸಂವಿಧಾನಕ್ಕೆ ಗೌರವ ಕೊಟ್ಟಂತಾಗಲಿದೆ. ಸಂವಿಧಾನದ ಮೂಲ ಸಮಪಾಲು ಸಮಬಾಳು ಎಂಬ ನಿಟ್ಟಿನಲ್ಲಿ ಸಂವಿದಾನ ಆಶಯಗಳನ್ನು ಸಂಪೂರ್ಣವಾಗಿ ಜಾರಿಗೆ ತರುವ ಕೆಲಸವನ್ನು ರಾಜಕೀಯ ಪಕ್ಷಗಳು ಮಾಡಬೇಕಿದೆ ಎಂದು ತಿಳಿಸಿದರು.

ಭೋವಿ ಸಮಾದಾಯದ ಸುಮಾರು 10-15 ಕೋಟಿ ಜನರು ದೇಶದಲ್ಲಿ ಇದ್ದರು ಕೂಡ ಸಂಸತ್ ಭವನ ಪ್ರವೇಶಕ್ಕೆ ಸಾಧ್ಯವಾಗುತ್ತಿಲ್ಲ. ರಾಜಕೀಯ ತುಳಿತಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಹಿಂದುಳಿದ, ಶೋಷಿತ ಸಮುದಾಯಗಳಿಗೆ ರಾಜಕೀಯ ಶಕ್ತಿಯನ್ನು ನೀಡಬೇಕಾದ ರಾಜಕೀಯ ಪಕ್ಷಗಳು ನಿರ್ಲಕ್ಷ್ಯ ತೋರಿಸುತ್ತಿವೆ. ಕೇವಲ ನಮ್ಮನ್ನು ಮತ ಹಾಕಲು ಬಳಸಿಕೊಳ್ಳಬೇಡಿ. ನಮ್ಮನ್ನು ಸಂಸತ್ ಭವನಕ್ಕೆ ಕಳಿಸಲು ಕೈ ಜೋಡಿಸಿ. ಈ ನಿಟ್ಟಿನಲ್ಲಿ ನೀವು ಎಡವಿದ್ದಿರಾ. ಇದರ ಪರಿಣಾಮ ಮುಂದೆ ಅನುಭವಿಸ ಬೇಕಾಗುತ್ತದೆ ಎಂದು ಎಚ್ಚರಿಸಿದರು.ಕಾಂಗ್ರೆಸ್ ಪಕ್ಷ ತನ್ನ ಅಭ್ಯರ್ಥಿಯನ್ನು ಘೋಷಣೆ ಮಾಡಿದೆ ಆದರೆ ಬಿ.ಫಾರಂ ನೀಡಿಲ್ಲ. ಈಗಲೂ ಸಹಾ ಕಾಲ ಮಿಂಚಿಲ್ಲ. ನಮ್ಮ ಸಮಾಜಕ್ಕೆ ಟಿಕೆಟ್ ನೀಡುವುದರ ಬಗ್ಗೆ ಪಕ್ಷದ ವರಿಷ್ಠರು ಆಲೋಚನೆ ಮಾಡಬೇಕಿದೆ.

ಇದೇ ರೀತಿ ಬಿಜೆಪಿ ಪಕ್ಷ ಇನ್ನೂ ಅಭ್ಯರ್ಥಿಯನ್ನು ಘೋಷಣೆ ಮಾಡಿಲ್ಲ ಅವರು ಸಹಾ ನಮ್ಮ ಸಮಾಜದವರಿಗೆ ಚಿತ್ರದುರ್ಗದಲ್ಲಿ ಟಿಕೆಟ್ ನೀಡುವುದರ ಮೂಲಕ ನಮ್ಮನ್ನು ಗುರುತಿಸಬೇಕಿದೆ ಎಂದು ತಿಳಿಸಿದರು.

ಕಾಂಗ್ರೆಸ್‌ನಲ್ಲಿ ನೇರ್ಲಗುಂಟೆ ರಾಮಪ್ಪ, ಬಿಜೆಪಿಯಿಂದ ರಘುಚಂದನ್ ರವರಿಗೆ ಟಿಕೆಟ್ ನೀಡಬೇಕು. ಈಗಲೂ ಸಮಯ ಇದ್ದು, ಕೊಲಾರ ಹಾಗೂ ಚಿತ್ರದುರ್ಗ ಕ್ಷೇತ್ರದಲ್ಲಿ ನಮ್ಮ ಸಮುದಾಯದ ಅಭ್ಯರ್ಥಿಗಳಿಗೆ ಟಿಕೆಟ್ ನೀಡಬೇಕು. ಇಲ್ಲವಾದರೆ, ಮುಂದಿನ ತೀರ್ಮಾನವನ್ನು ರಾಜ್ಯ ಮಟ್ಟದಲ್ಲಿ ಸಭೆ ನಡೆಸಿ ಸೂಕ್ತ ತೀರ್ಮಾನ ಕೈಗೊಳ್ಳಬೇಕಾಗುತ್ತದೆ ಮತ್ತು ಪಕ್ಷೇತರ ಅಭ್ಯರ್ಥಿಯಾಗಿ ಚುನಾವಣೆಯಲ್ಲಿ ಸ್ಪರ್ಧೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಭೋವಿ ಸಮಾಜದ ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ, ಮುಖಂಡರಾದ ನೇರ್ಲಗುಂಟೆ ರಾಮಪ್ಪ, ಮೋಹನ್, ರುದ್ರಣ್ಣ, ಲಕ್ಷ್ಮಣ್, ಆಂಜನೇಯ, ತಿಮ್ಮಣ್ಣ, ಮಂಜುನಾಥ್, ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

## ತರಬೇತಿಯು ವೃತ್ತಿಜೀವನದ ಪರಿಪೂರ್ಣತೆಗೆ ಕಾರಣ

» **ದಾವಣಗೆರೆ**



ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ಬೆಂಗಳೂರು, ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ, ದಾವಣಗೆರೆ, ಉತ್ತರ ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ನಿಯಮಿತ, ಹಾಗೂ ತೋಟ ಉತ್ಪನ್ನಗಳ ಮಾರಾಟ ಸಹಕಾರ ಸಂಘ ನಿ., ಚನ್ನಗಿರಿ (ತುಮ್‌ಕೋಸ್ ಲಿ.,) ಇವರುಗಳ ಸಂಯುಕ್ತ ಆಶ್ರಯದಲ್ಲಿ ಇತ್ತೀಚಿಗೆ ತೋಟ ಉತ್ಪನ್ನಗಳ ಮಾರಾಟ ಸಹಕಾರ ಸಂಘದ ಅಧಿಕಾರಿ, ಸಿಬ್ಬಂದಿ ವರ್ಗದವರಿಗೆ 2 ದಿನಗಳ ವೃತ್ತಿ ಕೌಶಲ್ಯ ಕುರಿತು. ರಾಜ್ಯ ಮಟ್ಟದ ವಿಶೇಷ ಕಾರ್ಯದಕ್ಷತೆ ತರಬೇತಿ ಶಿಬಿರವನ್ನು ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿಯ ಮನೋಮಯ ರೆಸಾರ್ಟ್‌ನಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ತುಮ್‌ಕೋಸ್‌ನ ವ್ಯವಸ್ಥಾಪಕ ನಿರ್ದೇಶಕ ಎನ್.ಪಿ. ಮಧು, ಸಹಕಾರ ಸಂಗಗಳಲ್ಲಿ ಕಲಿಕೆಯು ನಿರಂತರ ಪ್ರಕ್ರಿಯೆಯಾಗಿದ್ದು, ಜಿ.ಎಸ್.ಟಿ., ಆದಾಯ ತೆರಿಗೆ, ಮತ್ತು ಮತ್ತಿತರ ತೆರಿಗೆಗಳು ಮತ್ತು ಸಹಕಾರ ಸಂಘಗಳಲ್ಲಿನ ಅಧಿಕಾರಿಗಳು ಒತ್ತಡ ನಿರ್ವಹಣೆ, ಸಮಯದ ನಿರ್ವಹಣೆ ಮಾರಾಟ ತಂತ್ರಗಳ ಬಗ್ಗೆ ಸಂಪೂರ್ಣ ಜ್ಞಾನ ಹೋಂದುವುದು ಅತ್ಯಅವಶ್ಯಕವಾಗಿದೆ ಎಂದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷ ಜಿ.ಟಿ ದೇವೇಗೌಡ, ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಸಿರಿಗೆರೆ ರಾಜಣ್ಣ ಕಾರ್ಯಕ್ರಮ ಯಶಸ್ವಿಯಾಗಲೆಂದು ಶುಭ ಕೋರಿದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಬಾಪೂಗೌಡ ಡಿ.ಪಾಟೀಲ ಮಾತನಾಡಿ, ತರಬೇತಿಯು ವೃತ್ತಿಜೀವನವನ್ನು ಪರಿಪೂರ್ಣತೆಯತ್ತ ಕೊಂಡ್ಯೊಯುತ್ತದೆ. ಜೊತೆಗೆ ಸಹಕಾರ ಸಂಘಗಳಲ್ಲಿ ಹೆಚ್ಚು ದಕ್ಷತೆಯಿಂದ ಕಾರ್ಯನಿರ್ವಹಿಸಲು ಸಾದ್ಯವಾಗುತ್ತದೆ. ಇಲ್ಲಿ ಪಡೆದಂತ ಸಂಪೂರ್ಣ ಜ್ಞಾನವನ್ನು ನಿಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅಲ್ಲದೇ ಮಹಾಮಂಡಳವು ರಾಜ್ಯದಲ್ಲಿ ಸಹಕಾರ ಚಳುವಳಿಯನ್ನು ಬಲಗೋಳಿಸಲು ಸಹಕಾರ ಸಂಘಗಳ ಬೇಡಿಕೆ ತಕ್ಕಂತೆ ವಿಷಯಗಳನ್ನು ಹಾಗೂ ವಿಷಯ ತಜ್ಞರಿಂದ ತರಬೇತಿಯನ್ನು ನೀಡುತ್ತಿದೆ ರಾಜ್ಯಾದ್ಯಂತ ಸಹಕಾರ ಶಿಕ್ಷಣ ತರಬೇತಿ ಮತ್ತು ಪ್ರಚಾರ ಕಾರ್ಯಗಳನ್ನು ಹಮ್ಮಿಕೊಂಡು ಯಶಸ್ವಿಗೋಳಿಸಿ ಲಕ್ಷಾಂತರ ಸಹಕಾರಿಗಳಿಗೆ ಸಹಕಾರಿಯಾಗಿದೆ ಎಂದು ತಿಳಿಸಿದರು.

ಮಂಗಳಗೌಡ ದಾನಪ್ಪಗೌಡ್ರ ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮ ನಿರೂಪಿಸಿದರೆ, ಹಾವೇರಿಯ ಗೋಪಾಲ್ ಸ್ವಾಗತಿಸಿದರು. ದಾವಣಗೆರೆ ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟದ ಜಿಲ್ಲಾ ಸಹಕಾರ ಶಿಕ್ಷಕ ಕೆ.ಹೆಚ್.ಸಂತೋಷಕುಮಾರ ವಂದಿಸಿದರು. ಈ ವೇಳೆ ಸಂಪನ್ಮೂಲ ವ್ಯಕ್ತಿಯಾಗಿದ್ದ ಅನಿಲ್ ಭಾರದ್ವಾಜ್, ಮಹೇಶ್ ಮಾಶಾಳ್ ಇತರರು ಇದ್ದರು.ತೋಟ ಉತ್ಪನ್ನಗಳ ಮಾರಾಟ ಸಹಕಾರ ಸಂಘ ನಿ., ಚನ್ನಗಿರಿ ಹಾಗೂ ದಾವಣಗೆರೆ ಜಿಲ್ಲಾ ಸಹಕಾರ ಯೂನಿಯನ್‌ನ ಸಿಬ್ಬಂದಿಗಳು ಇದ್ದರು.

## ಚಿತ್ರಕಲೆಯು ಮಗುವಿನ ಆಪ್ತಮಿತ್ರ: ಚನ್ನಕೇಶವ



» **ಪರಶುರಾಂಪುರ**

ಪ್ರತಿಯೊಂದು ಮಗುವು ಒಬ್ಬ ಶ್ರೇಷ್ಠ ಕಲಾವಿದ.ಚಿತ್ರಗಳು ಮಕ್ಕಳ ಭಾಷೆ. ಅವರಿಗೆ ಮೊದಲು ಬರುವುದೇ ಚಿತ್ರಕಲೆ.ಆನಂತರ ಬರಹ-ಓದು. ಚಿತ್ರ ಗೀಚುವುದೇ ಅವರಿಗೆ ಆನಂದ. ಆಟಕ್ಕಿಂತಲೂ ಹೆಚ್ಚು ಸಮಯವನ್ನು ಚಿತ್ರಕಲೆಯಲ್ಲಿ ತೊಡಗಿಸಿಕೊಳ್ಳಲು ಇಚ್ಛಿಸುವುದನ್ನು ಕಾಣಬಹುದು ಎಂದು ಸರ್ವೋದಯ ಎಜುಕೇಷನ್ ಟ್ರಸ್ಟ್ ಕಾರ್ಯದರ್ಶಿ ಚೆನ್ನಕೇಶವ ತಿಳಿಸಿದರು. ಗ್ರಾಮದ ಪಾವಗಡ ರಸ್ತೆಯಲ್ಲಿರು ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ಶನಿವಾರ ಆಯೋಜಿಸಿದ್ದ ಚಿತ್ರಕಲಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಚಿತ್ರಕಲೆಯೆಂಬ ಈ ವರ್ಣಮಯ ಕ್ರಿಯೆ ಮಗುವಿನ ಆಪ್ತಮಿತ್ರನಂತೆ. ಮಕ್ಕಳು ಸಂಗೀತಕ್ಕೂ ಹಾಡಿಗೂ ಕಿವಿಗೊಟ್ಟರೂ ಅದು ಅವರ ನೆನೆಪಿನಲ್ಲಿ ಉಳಿಯಲಾರದು,ಹೀಗಾಗಿ ಅದು ಅವರಿಗೆ ಅಗೋಚರ ಅನುಭವ ಆಗುತ್ತದೆ. ಆದರೆ ಒಂದು ಚಿತ್ರವನ್ನು ಅವರು ನೋಡಿ ನೆನಪಿಟ್ಟುಕೊಳ್ಳಬಲ್ಲರು. ಎಸ್‌ಜೆಎಂ ಕಾಲೇಜಿನ ಪ್ರಾಂಶುಪಾಲ ಕಣ್ಮೇಶಪ್ಪ ಮಾತನಾಡಿ,ಚಿತ್ರಕಲೆಯು ಮಗುವಿನ ಮಾನಸಿಕ ಬೆಳವಣಿಗೆಗೆ ಸ್ವಾಭಾವಿಕ ಸಾಧನ,ರಚನಾ ಸಾಮರ್ಥ್ಯದ ಬೆಳವಣಿಗೆ,ಭಾವಾಭಿವ್ಯಕ್ತಿ,ಕಲ್ಪನಾಶಕ್ತಿ ವರ್ಧಿಸುವುದಕ್ಕೆ ಅವಕಾಶ ನೀಡುತ್ತದೆ.ಕೆಲವು ಹಂತಗಳಲ್ಲಿ ಮಗು ಮಾತಿನಲ್ಲಿ ವ್ಯಕ್ತಪಡಿಸಲಾಗದ ತನ್ನ ಸಂವೇದನೆಯನ್ನು ಹೊರಗೆಡವಲು ಚಿತ್ರಕಲೆಯಂತಹ ಮೌನ ಭಾಷೆಯನ್ನು ಅವಲಂಭಿಸುತ್ತದೆ.ತಾನು ರೂಪಿಸಿದ ಚಿತ್ರದ ಮೂಲಕ ತನ್ನ ಮನಸ್ಸಿನಲ್ಲಿರುವ ಅದೃಶ್ಯವಾದ ಅನೇಕ ಭಾವನೆಗಳ ಸ್ವರೂಪವನ್ನು ತಾನೇ ಸೃಷ್ಟಿಸಿ ಅದನ್ನು ತಾನೇ ನೋಡಿ ಆನಂದಿಸುತ್ತದೆ ಎಂದರು. ಈ ವೇಳೆಯಲ್ಲಿ ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ ಹಾಗೂ ಉತ್ತಮ ಚಿತ್ರಾಕಲೆಗಳಿಗೆ ಪ್ರಶಸ್ತಿ ವಿಜೇತ ಮಾಡಲಾಯಿತು. ಸಂದರ್ಭದಲ್ಲಿ ಸಂಸ್ಥೆಯ ಅಧೀಕ್ಷಕ ಪಂಚಾಕ್ಷರಪ್ಪ,ಪ್ರಾಂಶುಪಾಲ ಶಾಂತಕುಮಾರ,ಮುಖ್ಯೋಪಾಧ್ಯಯರಾದ ಶ್ರೀಶೈಲಮೂರ್ತಿ,ಅಶ್ವಿನಿ,ಚಿತ್ರಕಲಾ ಶಿಕ್ಷಕ ವಿರೇಶ್ ಸೇರಿದಂತೆ ಸಂಸ್ಥೆಯ ಸಿಬ್ಬಂಧಿ ಹಾಗೂ ವಿದ್ಯಾರ್ಥಿಗಳಿದ್ದರು.

## ನಗರದಲ್ಲಿ ನರಹರಿ ಸದ್ಗುರು ಸಂಘ ಉದ್ಘಾಟನೆ

» **ಚಿತ್ರದುರ್ಗ**

ನಗರ ಮತ್ತು ಆಸುಪಾಸಿನ ಊರುಗಳ ಆಸ್ತಿಕ ಜನರ ಆಧ್ಯಾತ್ಮಿಕ ಹಸಿವನ್ನು ಹಿಂಗಿಸುತ್ತಿದ್ದ ನರಹರಿ ಸದ್ಗುರು ಸಂಘವು ಕಾಲಕ್ರಮೇಣ ನಿತ್ರಾಣಗೊಂಡು ಕಳಾಹೀನವಾಗಿದ್ದ ಸಂಘ ಈಗ ಮತ್ತೆ ಪುನಶ್ಚೇತನಗೊಂಡಿದೆ ಎಂದು ಚಳ್ಳಕೆರೆಯ ನರಹರಿ ಸದ್ಗುರು ಆಶ್ರಮದ ರಾಜಾರಾಂ ಶಾಸ್ತಿಗಳು ಹೇಳಿದರು. ಕನ್ಯಕಾಪರಮೇಶ್ವರಿ ದೇವಸ್ಥಾನದಲ್ಲಿ ಶುಕ್ರವಾರ ನರಹರಿ ಸದ್ಗುರು ಸಂಘ ಉದ್ಘಾಟಿಸಿ ಆಶೀರ್ವಚನ ನೀಡಿದರು.




**ಪ್ರಮುಖ ಸುದ್ದಿ**

# ನೀರನ್ನು ಮಿತವಾಗಿ ಬಳಸಲು ಮಕ್ಕಳಲ್ಲಿ ಜಾಗೃತಿ ಮೂಡಿಸಿ

» **ಚಿತ್ರದುರ್ಗ**




ಅಮೂಲ್ಯವಾದ ನೀರನ್ನು ಮಿತವಾಗಿ ಬಳಸಿ ಜಲಸುರಕ್ಷತೆ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ ಎಂದು ಚಿತ್ರದುರ್ಗ ಸೈನ್ಸ್ ಪೌಂಡೇಷನ್ ಅಧ್ಯಕ್ಷರು ಹಾಗೂ ಆರ್ಥಿಕ ಚಿಂತಕ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ಬಿ.ಇಡಿ. ಪ್ರಶಿಕ್ಷಣಾರ್ಥಿಗಳಿಗೆ ಕರೆ ನೀಡಿದರು.

ಚಿತ್ರದುರ್ಗ ಸೈನ್ಸ್ ಫೌಂಡೇಷನ್ ವತಿಯಿಂದ ಪಿ.ವಿ.ಎಸ್. ಶಿಕ್ಷಣ ಮಹಾವಿದ್ಯಾಲಯದಲ್ಲಿ ಬಿ.ಇ.ಡಿ. ಪ್ರಶಿಕ್ಷಣಾರ್ಥಿಗಳಿಗೆ ಶುಕ್ರವಾರ ಏರ್ಪಡಿಸಲಾಗಿದ್ದ ವಿಶ್ವ ಜಲದಿನ ಉದ್ಘಾಟಿಸಿ ಮಾತನಾಡಿದರು.

ನೀರಿಲ್ಲದೆ ಬದುಕಿಲ್ಲ. ಕಡಿಮೆ ಲಭ್ಯವಿರುವ ನೀರನ್ನು ಸಂರಕ್ಷಿಸಿಕೊಂಡು ಮುಂದಿನ ಪೀಳಿಗೆಗೆ ಉಳಿಸದಿದ್ದರೆ ಶಪಿಸುವುದು ಗ್ಯಾರೆಂಟಿ. ಶುದ್ದವಾದ ನೀರಿನ ಪ್ರಮಾಣ ಕಡಿಮೆಯಾಗಿದೆ. ಕಲುಷಿತ ನೀರಿನ ಸೇವನೆಯಿಂದ ಸಾಂಕ್ರಾಮಿಕ ರೋಗಗಳು ಹರಡುತ್ತದೆ. ಆಹಾರ ಕೂಡ ರಾಸಾಯನಿಕದಿಂದ ಕೂಡಿದೆ. ಬಹಳಷ್ಟು ಯುದ್ದಗಳು ನೀರಿನ ಹಂಚಿಕೆಗಾಗಿ ನಡೆಯುತ್ತಿವೆ. ನೀರಿನ ಸದ್ಬಳಕೆ ಮೂಲಕ ಶಾಂತಿ ಕಂಡುಕೊಳ್ಳಬಹುದು ಎಂದು ಹೇಳಿದರು.

ಶಿಕ್ಷಕರುಗಳಿಂದ ಮಾತ್ರ ದೇಶದಲ್ಲಿ ಬದಲಾವಣೆ ತರಲು ಸಾಧ್ಯ. ಈ ನಿಟ್ಟಿನಲ್ಲಿ ಬಿ.ಇ.ಡಿ. ಪ್ರಶಿಕ್ಷಣಾರ್ಥಿಗಳು ಪುಸ್ತಕಗಳ ಆಚೆಗೆ ಸಾಕಷ್ಟು ವಿಚಾರಗಳನ್ನು ತಿಳಿದುಕೊಳ್ಳಬೇಕಿದೆ. ಕ್ರಿಯಾಶೀಲ ಶಿಕ್ಷಕನಿಂದ ಸೃಜನಶೀಲ ಪ್ರಜೆಗಳನ್ನು ಸೃಷ್ಠಿಸಬಹುದು. ನೀರಿನ ಲಭ್ಯತೆಯನ್ನು ಗಮನದಲ್ಲಿಟ್ಟುಕೊಂಡು ಹನಿ ಹನಿ ನೀರನ್ನು ವ್ಯರ್ಥವಾಗಲು ಬಿಡದೆ ಮಿತವಾಗಿ ಬಳಸಬೇಕು. ಧಾರ್ಮಿಕ ಆಚರಣೆಗಳಿಂದ ನೈಸರ್ಗಿಕ ನದಿ ನೀರು ಕಲುಷಿತಗೊಳ್ಳುತ್ತಿದೆ. ಕಾನೂನು ಎಲ್ಲಿ ಪರಿಣಾಮಕಾರಿಯಾಗಿ ಇರುವುದಿಲ್ಲವೋ ಅಲ್ಲಿ ಅಭಿವೃದ್ದಿ ಕಾಣುವುದು ಕಷ್ಟ. ಕೃಷಿಯಲ್ಲಿ ತಂತ್ರಜ್ಞಾನದ ಬಳಕೆ ಮುಖ್ಯ. ಆಗ ಮಾತ್ರ ಕಡಿಮೆ ನೀರಿನಲ್ಲಿ ಹೆಚ್ಚು ಬೆಳೆ ತೆಗೆಯಬಹುದು. ನೀರಿನ ಬಳಕೆಗೆ ತಗುಲುವ ವೆಚ್ಚವೆಷ್ಟೆಂಬ ಪರಿಜ್ಞಾನ ಎಲ್ಲರಲ್ಲಿಯೂ ಇರಬೇಕು ಎಂದು ತಿಳಿಸಿದರು.

ಚಿತ್ರದುರ್ಗ ಸೈನ್ಸ್ ಫೌಂಡೇಷನ್ ನಿರ್ದೇಶಕರು ಹಾಗೂ ನಿವೃತ್ತ ಪ್ರಾಂಶುಪಾಲರಾದ ಪ್ರೊ.ಈ.ರುದ್ರಮುನಿ ಮಾತನಾಡಿ ಜಲ ಎನ್ನುವುದು ಅತ್ಯಂತ ಗಂಭೀರವಾದ ವಿಷಯವಾಗಿರುವುದರಿಂದ ಪ್ರತಿಯೊಬ್ಬರು ನೀರು ಸಂರಕ್ಷಣೆ ಕಡೆ ಜಾಗೃತಿ ವಹಿಸಬೇಕು. ನೀರಿನ ಮಹತ್ವವನ್ನು ಅರಿತು 1992-93 ರಲ್ಲಿ ವಿಶ್ವಸಂಸ್ಥೆ ಮಾ.22 ರಂದು ವಿಶ್ವಜಲ ದಿನವನ್ನಾಗಿ ಘೋಷಿಸಿತು. ಅಂದಿನಿಂದ ಇಲ್ಲಿಯವರೆಗೂ ಪ್ರತಿವರ್ಷವೂ ವಿಶ್ವಜಲ ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ ಎಂದರು.

ಸಕಲ ಜೀವರಾಶಿಗಳಿಗೂ ಅತ್ಯವಶ್ಯಕ ಸಂಪನ್ಮೂಲಗಳಲ್ಲಿ ನೀರು ಬಹಳ ಮುಖ್ಯ. ನೀರಿನ ಮಿತಬಳಕೆ ಬಗ್ಗೆ ಎಲ್ಲರಲ್ಲಿಯೂ ಅರಿವು ಮೂಡಿಸಬೇಕಿದೆ. ಜಲಮೂಲಗಳು ಮಾಲಿನ್ಯವಾಗಿರುವುದರಿಂದ ಮಕ್ಕಳಲ್ಲಿ ನೀರಿನ ಕುರಿತು ಅರಿವು ಮೂಡಿಸಬೇಕು. ಕೊಳವೆಬಾವಿ ಕೊರೆಸಿ ಅಂತರ್ಜಲವನ್ನು ಬರಿದು ಮಾಡಲಾಗಿದೆ. ಮುಂದಿನ ಪೀಳಿಗೆಗೆ ನೀರಿನ ಅಭಾವವಾಗಲಿದೆ. ಅದಕ್ಕಾಗಿ ನೀರನ್ನು ವ್ಯರ್ಥವಾಗಿ ಬಳಸದೆ ಸಂಪನ್ಮೂಲವನ್ನು ಕಾಪಾಡಿಕೊಳ್ಳುವುದು ಎಲ್ಲರ ಜವಾಬ್ದಾರಿ. ವೈಜ್ಞಾನಿಕ ಕೃಷಿ ಪದ್ದತಿಯನ್ನು ಅಳವಡಿಸಿಕೊಳ್ಳುವುದು ಮುಖ್ಯ ಎಂದರು.

ಪಿ.ವಿ.ಎಸ್. ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಶ್ರೀಮತಿ ಎಸ್.ಆರ್. ಉಷಾ ಅಧ್ಯಕ್ಷತೆ ವಹಿಸಿದ್ದರು.

ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಉಪಾಧ್ಯಕ್ಷ ಚಳ್ಳಕೆರೆ ಯರ್ರಿಸ್ವಾಮಿ, ಖಜಾಂಚಿ ನಾಗಲಿಂಗರೆಡ್ಡಿ, ಕಾರ್ಯದರ್ಶಿ ಎಚ್.ಎಸ್.ಟಿ. ಸ್ವಾಮಿ, ಹಿರಿಯ ಪತ್ರಕರ್ತ ಜಿ.ಎಸ್.ಉಜ್ಜಿನಪ್ಪ ವೇದಿಕೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ತುರುವನೂರು ಹೋಬಳಿ ಚೆಕ್‌ಪೋಸ್ಟ್‌ನಲ್ಲಿ ದಾಖಲೆ ಇಲ್ಲದ ರೂ.1.50 ಲಕ್ಷ ವಶ

» **ಚಿತ್ರದುರ್ಗ**

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ನೀತಿ ಸಂಹಿತೆ ಜಾರಿಯಾಗಿದ್ದು, ದಾಖಲೆ ಇಲ್ಲದೆ ಸಾಗಿಸುತ್ತಿದ್ದ ರೂ.1.50 ಲಕ್ಷ ಹಣವನ್ನು ತುರುವನೂರು ಹೋಬಳಿ ಚೆಕ್‌ಪೋಸ್ಟ್‌ನಲ್ಲಿ ಶನಿವಾರ ವಶಕ್ಕೆ ಪಡೆಯಲಾಗಿದೆ.

ಎಫ್‌ಎಸ್‌ಟಿ ತಂಡದ ಮುಖ್ಯಸ್ಥ ಟಿ.ಕೆ.ಸಂತೋಷ್ ಕುಮಾರ್ ಅವರು ತುರುವನೂರು ಹೋಬಳಿ ಚೆಕ್‌ಪೋಸ್ಟ್‌ನಲ್ಲಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಾಹನಗಳನ್ನು ಪರಿಶೀಲನೆ ಮಾಡುವಾಗ ಕೊಪ್ಪಳದ ಇರ್ಫಾನ್ ಶೇಕ್ ಬಿನ್ ದಾದಾಪೀರ್ ಎಂಬುವರು ಕಾರಿನಲ್ಲಿ ಸೂಕ್ತ ದಾಖಲೆಗಳಿಲ್ಲದೇ ಸಾಗಿಸುತ್ತಿದ್ದ ರೂ. 1.50 ಲಕ್ಷ ಹಣವನ್ನು ಎಫ್‌ಎಸ್‌ಟಿ ತಂಡ ತಪಾಸಣೆ ನಡೆಸಿ, ಹಣ ವಶಪಡಿಸಿಕೊಂಡಿದೆ. ಜಪ್ತಿ ಪಡಿಸಿಕೊಂಡ ಹಣವನ್ನು ನಗದು ವಶಪಡಿಸಿಕೊಳ್ಳುವ ಪರಿಹಾರ ಸಮಿತಿ ಗಮನಕ್ಕೆ ತಂದಿದ್ದು, ಈ ಹಣವನ್ನು ಚಳ್ಳಕೆರೆಯ ಉಪ ಖಜಾನೆಯ ಭದ್ರತಾ ಕೊಠಡಿಯಲ್ಲಿ ಸುರಕ್ಷಿತವಾಗಿ ಇರಿಸಲಾಗಿದೆ ಎಂದು ಚಳ್ಳಕೆರೆ ತಹಶೀಲ್ದಾರ್ ತಿಳಿಸಿದ್ದಾರೆ.

### ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಆಚರಣೆ



» **ದಾವಣಗೆರೆ**

ಜಗದ್ಗುರು ರೇಣುಕಾಚಾರ್ಯ ಆದರ್ಶವಾದಿ, ಸಮಾಜಕ್ಕೆ ಅಹಿಂಸೆ, ಆಧ್ಯಾತ್ಮಿಕ ಚಿಂತನೆ ಹಾಗೂ ಭಕ್ತಿ, ಭಾವನೆಗಳನ್ನು ಸಮಾಜಕ್ಕೆ ನೀಡುವ ಮೂಲಕ ಮಾದರಿ ಸಮಾಜ ನಿರ್ಮಾಣದ ಬುನಾದಿ ಹಾಕಿದವರು ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.ಅವರು ಶನಿವಾರ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಜಿಲ್ಲಾ ಜಂಗಮ ಸಮಾಜ, ಇವರುಗಳ ಸಂಯುಕ್ತಶ್ರಯದಲ್ಲಿ ಜಿಲ್ಲಾಡಳಿತ ಭವನದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ವಿಶ್ವದಲ್ಲಿ ಶಾಂತಿಯನ್ನು ನೆಲೆಸಲು ಹಾಗೂ ವೀರಶೈವ ಧರ್ಮ ಒಂದು ಉತ್ತಮ ಹಾದಿಯಲ್ಲಿ ನಡೆಸುವುದರಲ್ಲಿ ಕಾರಣಿಭೂತರಾಗಿದ್ದಾರೆ. ಎಲ್ಲರಿಗೂ ಸಮಾನ ಚಿಂತನೆಗಳನ್ನು ನೀಡಿ ಉತ್ತಮ ಸಮಾಜವನ್ನು ನಿರ್ಮಾಣ ಮಾಡುವಲ್ಲಿ ಅವರ ಕಾಣಿಕೆ ಬಹಳ ಅತ್ಯುತ್ತಮವಾದುದು. ಇಂತಹ ಮಹಾನ್ ಪುರುಷರ ಜಯಂತಿಗಳನ್ನು ನಾವು ಸರಳವಾಗಿ ಮಾಡಿದ್ದೇವೆ, ಹಾಗೂ ಇವರ ಮಾರ್ಗ ಅನುಸರಿಸಿದಾಗ ನಮ್ಮ ಸಮಾಜ ಸಮೃದ್ಧಿಯಾಗಲಿದೆ ಎಂದು ತಿಳಿಸಿದರು. ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ ಭಾನು ಎಸ್. ಬಳ್ಳಾರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘದ ನಿರ್ದೇಶಕರಾದ ಇಂದುಧರ್ ನಿಶಾನಿಮಠ, ರೈತ ಮುಖಂಡರಾದ ಬಲ್ಲೂರು ರವಿಕುಮಾರ, ಜಂಗಮ ಸಮಾಜದ ಮುಖಂಡರು ಸಿದ್ದಲಿಂಗ ಸ್ವಾಮಿ, ಡಿ.ಎಂ. ಜಯದೇವಪ್ಪ, ದ್ರಾಕ್ಷಯಣಮ್ಮ ನಿಟ್ಟುವಳ್ಳಿ ಸುವರ್ಣಮ್ಮ ಎಂಸಿಎ ಬ್ಲಾಕ್, ಚಂದ್ರಮ್ಮ, ವಿನುತಾ ರವಿ, ರೇವಣಸಿದ್ದೇಶ್ ಎಂ ಆರ್, ರುದ್ರಮುನಿ ಸ್ವಾಮಿ, ಶ್ರೀಶೈಲ ಮಠದ ವೈದಿಕ ಪಾಠಶಾಲಾ ಮಕ್ಕಳು ಇನ್ನಿತರರು ಉಪಸಿತರಿದ್ದರು.

### ಅಬಕಾರಿ ಅಕ್ರಮ ತಡೆಗಟ್ಟಲು ತಂಡ ರಚನೆ

» **ದಾವಣಗೆರೆ**

ಲೋಕಸಭಾ ಚುನಾವಣೆ ನಡೆಯುತ್ತಿದ್ದು ಶಾಂತಯುತ, ಪಾರದರ್ಶಕ, ನಿಷ್ಪಕ್ಷಪಾತ ಚುನಾವಣೆ ನಡೆಸಲು ಅಕ್ರಮ ಕಳ್ಳಭಟ್ಟಿ ತಯಾರಿಕೆ, ನಕಲಿ ಮದ್ಯ, ಸರಾಯಿ, ಅಕ್ರಮ ಮದ್ಯ ಹಂಚಿಕೆ, ಮದ್ಯ, ಮಾದಕ ವಸ್ತುಗಳ ಸರಬರಾಜು ತಡೆಗಟ್ಟಲು ಜಿಲ್ಲೆಯಾದ್ಯಂತ ಕಟ್ಟುನಿಟ್ಟಿನ ಎಚ್ಚರ ವಹಿಸಲು ಅಬಕಾರಿ ಇಲಾಖೆ ಅಧಿಕಾರಿಗಳ ತಂಡ ರಚಿಸಲಾಗಿದೆ. ನಕಲಿ ಮದ್ಯ, ಅಕ್ರಮ ಮದ್ಯ ಹಂಚಿಕೆ, ಮಾದಕ ವಸ್ತುಗಳ ಸರಬರಾಜು ಸೇರಿದಂತೆ ಇತರೆ ಅಕ್ರಮಗಳು ಕಂಡುಬಂದಲ್ಲಿ ಟೋಲ್ ಫ್ರೀ ಸಂಖ್ಯೆ 18004250379 ಗೆ ಕರೆ ಮಾಡಬಹುದಾಗಿದೆ. ಉಳಿದಂತೆ ಅಬಕಾರಿ ಉಪ ಆಯುಕ್ತರ ಕಚೇರಿ ದೂರವಾಣಿ 08192-235316, 9449597061, 9449597063. ದಾವಣಗೆರೆ ಉಪವಿಭಾಗ ಉಪ ಅಧೀಕ್ಷಕರಿಗೆ 08192-225042, 9449597064, 9449597065, ಹೊನ್ನಾಳಿ ಉಪವಿಭಾಗದ ಉಪಾಧೀಕ್ಷಕರಿಗೆ 08188-295202, 9449597066, 9449597067, ಅಬಕಾರಿ ನಿರೀಕ್ಷಕರು ದಾವಣಗೆರೆ ವಲಯ-1 ಕ್ಕೆ 08192-224177, ವಲಯ-2 08192-221150, ಹರಿಹರ 08192-242166, ಚನ್ನಗಿರಿ 08189-295445, ಹೊನ್ನಾಳಿ ವಲಯ ಅಬಕಾರಿ ನಿರೀಕ್ಷಕರಿಗೆ 08188-295315 ಗೆ ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ.

# ಅಂಧರಿಗೆ ಸಾಮಾನ್ಯ ಜನರಿಗಿಂತ ಹೆಚ್ಚು ಪ್ರತಿಭೆ

» **ಚಿತ್ರದುರ್ಗ**





ಅಂಧರ ಬಾಳಿಗೆ ಬೆಳಕಾಗುವ ದೂರದೃಷ್ಟಿಯಿಟ್ಟುಕೊಂಡು ಬೆಂಗಳೂರಿನ ಎನೋಬಲ್ ಇಂಡಿಯಾ ಪರಿವರ್ತನಾ ಸಂಸ್ಥೆ ಮಾಳಪ್ಪನಹಟ್ಟಿ ಸಮೀಪವಿರುವ ತೀಕ್ಷ್ಣ ಅಂಧರ ಶಾಲೆಯಲ್ಲಿ ಎಲ್ಲಾ ಕಡೆ ವರ್ಕ್‌ಶಾಪ್ ನಡೆಸುತ್ತಿದ್ದು, ದೃಷ್ಟಿಹೀನ ಮಕ್ಕಳು ಇದರ ಪ್ರಯೋಜನ ಪಡೆದುಕೊಳ್ಳುವಂತೆ ಎಸ್.ಜೆ.ಎಂ. ಕಾಲೇಜು ಪ್ರಾಂಶುಪಾಲರಾದ ಪಂಚಾಕ್ಷರಿ ತಿಳಿಸಿದರು.

ಮಾಳಪ್ಪನಹಟ್ಟಿ ಸಮೀಪವಿರುವ ತೀಕ್ಷ್ಣ ಅಂಧರ ಪುನಶ್ಚೇತನ ಶಾಲೆಯಲ್ಲಿ ಶನಿವಾರ ನಡೆದ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡಿದ ಅವರು ಅಂಧರಿಗೆ ಸಾಮಾನ್ಯ ಜನರಿಗಿಂತ ಹೆಚ್ಚು ಪ್ರತಿಭೆಯಿರುತ್ತದೆ. ಅನೇಕ ವರ್ಷಗಳಿಂದಲೂ ತೀಕ್ಷ್ಣ ಅಂಧರ ಪುನಶ್ಚೇತನ ಶಾಲೆ ನಿಮ್ಮ ಭವಿಷ್ಯಕ್ಕಾಗಿ ದುಡಿಯುತ್ತಿದೆ. ನಮ್ಮ ಕಾಲೇಜಿಗೆ ಪ್ರವೇಶ ಪಡೆಯಲು ಬರುವ ಅಂಧರಿಗೆ ಎಲ್ಲಾ ರೀತಿಯ ಸಹಕಾರ ನೀಡುತ್ತೇವೆ. ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ವಿಶೇಷ ಸ್ಕಾಲರ್‌ಶಿಪ್ ಸೌಲಭ್ಯವಿದೆ. ಅದನ್ನು ತಲುಪಿಸುವಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆಂದು ಭರವಸೆ ನೀಡಿದರು.

ಎನೋಬಲ್ ಇಂಡಿಯಾ ಸಂಸ್ಥೆಯ ರಾಜೇಶ್ ಮಾತನಾಡಿ 1990 ರಲ್ಲಿ ಎನೋಬಲ್ ಇಂಡಿಯಾ ಸ್ಥಾಪನೆಯಾಯಿತು. ಆರಂಭದಲ್ಲಿ ನಾಲ್ಕು ಅಂಧ ಮಕ್ಕಳಿಗೆ ಕಂಪ್ಯೂಟರ್ ಕಲಿಸುತ್ತಿತ್ತು. ಈಗ ಸಾವಿರಾರು ಮಕ್ಕಳಿಗೆ ಹೇಳಿಕೊಡುತ್ತಿದ್ದು, ದೇಶಾದ್ಯಂತ ಮುಂದೆ ಹತ್ತು ಲಕ್ಷ ಅಂಧ ಮಕ್ಕಳಿಗೆ ಕಂಪ್ಯೂಟರ್ ಹೇಳಿಕೊಡುವ ಗುರಿಯಿಟ್ಟುಕೊಂಡಿದೆ. ಹಾಗಾಗಿ ಜಿಲ್ಲೆಯಲ್ಲಿ ಐದು ದಿನಗಳ ಕಾಲ ಎಲ್ಲಾ ಕಡೆ ಅಂಧ ಮಕ್ಕಳಿಗೆ ಕಾರ್ಯಾಗಾರ ನಡೆಸಲಾಗುವುದು. ಪೆನ್ ಲೇಬಲರ್, ಆರ್ಬಿಟ್ ರೀಡರ್, ಹ್ಯಾಂಡ್ ಮ್ಯಾಗ್ನಿಫೈಯರ್, ಕೀಬೋ ಆಕ್ಸಿಸ್ ಡಿವೈಸರ್ ಇನ್ನು ಹತ್ತು ಹಲವಾರು ಸಾಧನಗಳ ಮೂಲಕ ಅಂಧರು ಸುಲಭವಾಗಿ ಬರೆಯುವ, ಓದುವ ಹಾಗೂ ಕಂಪ್ಯೂಟರ್‌ನಲ್ಲಿ ಪ್ರಿಂಟ್ ತೆಗೆದುಕೊಳ್ಳಬಹುದು ಎಂದು ಹೇಳಿದರು.

ಮಣಿಕಂಠ ಮಾತನಾಡಿ ನಮ್ಮ ಸಂಸ್ಥೆಯಲ್ಲಿ ಓದಿದ ಅನೇಕ ಅಂಧರು ಸರ್ಕಾರಿ ನೌಕರಿಯಲ್ಲಿದ್ದಾರೆ. ಬೆಂಗಳೂರಿನ ಎನೋಬಲ್ ಇಂಡಿಯಾ ಸಂಸ್ಥೆಯವರು ಅತ್ಯುತ್ತಮವಾದ ಕಾರ್ಯಕ್ರಮ ಹಮ್ಮಿಕೊಂಡಿರುವುದು ನಿಜಕ್ಕೂ ಶ್ಲಾಘನೀಯ. ತೀಕ್ಷ್ಣ ಅಂಧರ ಪುನಶ್ಚೇತನ ಸಂಸ್ಥೆಯ ಮಕ್ಕಳು ಇದರ ಪ್ರಯೋಜನ ಪಡೆದುಕೊಳ್ಳುವಂತೆ ಮನವಿ ಮಾಡಿದರು.

ತೀಕ್ಷ್ಣ ಅಂಧರ ಪುನಶ್ಚೇತನ ಸಂಸ್ಥೆಯ ಅಧ್ಯಕ್ಷೆ ಶ್ರೀಮತಿ ಕೌಶಲ್ಯ ಮಾತನಾಡುತ್ತ ಅಂಧರಿಗೆ ಬೆಳಕು ನೀಡುವ ಉದ್ದೇಶದಿಂದ ಎನೋಬಲ್ ಇಂಡಿಯಾ ಪರಿವರ್ತನಾ ಸಂಸ್ಥೆಯ ಸಹಯೋಗದೊಂದಿಗೆ ಜಿಲ್ಲೆಯಲ್ಲಿ ಐದು ದಿನಗಳ ಕಾರ್ಯಾಗಾರ ಏರ್ಪಡಿಸಿದ್ದು, ಅಂಧ ಮಕ್ಕಳಿಗೆ ಇದೊಂದು ವಿಶೇಷ ಅವಕಾಶ ಎಲ್ಲರೂ ಇದರಲ್ಲಿ ಪಾಲ್ಗೊಂಡು ಡಿವೈಸರ್‌ಗಳ ಪ್ರಯೋಜನ ಪಡೆದುಕೊಳ್ಳಿ ಎಂದು ತಿಳಿಸಿದರು.

# ಕರಿಯಮ್ಮದೇವಿ ಮಹಾರಥೋತ್ಸವದ ವೈಭವ

» **ಹೊಸದುರ್ಗ**




ತಾಲ್ಲೂಕಿನ ಕಸಬಾ ಹೋಬಳಿಯ ಮಳಲಿ ಗ್ರಾಮದಲ್ಲಿ ಶನಿವಾರ ಬೆಳಗ್ಗೆ ಶ್ರೀ ಮಹಿಷಾಸುರ ಮರ್ಧಿನಿ ಕರಿಯಮ್ಮ ದೇವಿಯ ರಥೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಸಂಭ್ರಮ ಸಡಗರದಿಂದ ವಿಜೃಂಭಣೆಯಿಂದ ನಡೆಯಿತು.

ಕಳೆದ ಒಂದು ವಾರಗಳಿಂದ ಅಮ್ಮನವರ ಜಾತ್ರಾ ಮಹೋತ್ಸವ ನಡೆಯುತ್ತಿದ್ದು, ಪ್ರತಿ ವರ್ಷದಂತೆ ದೇವಾಲಯದಲ್ಲಿ ಮಧುವಣಿಗೆ ಶಾಸ್ತ್ರ, ಹೂವಿನ ಉತ್ಸವ, ಕಳಸ ಸ್ಥಾಪನೆ, ಪುಣ್ಯಾಹ, ಪಂಚಾಮೃತ ಅಭಿಷೇಕ, ಧ್ವಜಾರೋಹಣ, ಹೊಳೆಪೂಜೆ, ಬೇವಿನಸೀರೆ, ಮಹಿಷಾವಾಹನೋತ್ಸವ, ಗಜ ವಾಹನೋತ್ಸವ, ಹಣ್ಣಿನ ರಾಶಿ ಮತ್ತು ಇನ್ನಿತರ ಧಾರ್ಮಿಕ ಪೂಜಾ ಕಾರ್ಯಗಳು ನಡೆದವು. ರಥೋತ್ಸವದ ಹಿನ್ನೆಲೆಯಲ್ಲಿ ಮಳಲಿ ಗ್ರಾಮದಲ್ಲಿ ಶನಿವಾರ ದೇವಿಯ ಭಕ್ತರ ಸಂಭ್ರಮ ಮನೆ ಮಾಡಿತ್ತು. ಇನ್ನೂ ದೇವಾಲಯವನ್ನು ಕೂಡ ಹಸಿರು ತಳಿರು ತೋರಣ, ಬಾಳೆಕಂದು, ಬಗೆ ಬಗೆಯ ಬಣ್ಣದ ಹೂಗಳು ಹಾಗೂ ವಿದ್ಯುತ್ ದೀಪಗಳಿಂದ ಅಲಂಕಾರಗೊಳಿಸಲಾಗಿತ್ತು. ರಥವನ್ನು ಬಗೆ ಬಗೆಯ ಬಣ್ಣದ ಬಟ್ಟೆಗಳು, ಬೃಹತ್ ಹೂವಿನ ಹಾರಗಳು, ಬಾವುಟಗಳಿಂದ ಸಿಂಗಾರಿಸಲಾಗಿತ್ತು. ಅಲಂಕಾರಗೊಂಡ ಅಮ್ಮನವರ ಮೂರ್ತಿಯನ್ನು ವಾದ್ಯ ಮೇಳದೊಂದಿಗೆ ಕರೆದುಕೊಂಡು ಹೋಗಿ ರಥದಲ್ಲಿ ಕೂರಿಸಲಾಯಿತು.

ನಂತರ ರಥೋತ್ಸವಕ್ಕೆ ಬಂದ ಭಕ್ತರುರಥಎಳೆದು,ಹೂವು,ನಾಣ್ಯ, ಉತ್ತುತ್ತಿ, ಬಾಳೆಹಣ್ಣನ್ನು ತೂರುವ ಮೂಲಕ ಭಕ್ತಿ ಸಮರ್ಪಿಸಿದರು. ಇದೇ ಸಂದರ್ಭದಲ್ಲಿ ಕರಿಯಮ್ಮ ದೇವಿಯ ಸೋಮದೇವರ ಕುಣಿತ ಸೇರಿದ್ದ ಭಕ್ತರ ಕಣ್ಮನ ಸೆಳೆಯಿತು.

# 1 ರಿಂದ ಒಂದು ತಿಂಗಳ ಕಾಲ ಜಾನುವಾರುಗಳಿಗೆ ಲಸಿಕಾಕರಣ

## ಜಾನುವಾರುಗಳಿಗೆ ಕಾಲುಬಾಯಿ ಜ್ವರದ ಲಸಿಕೆ ಹಾಕಿಸಲು ಮನವಿ



» **ದಾವಣಗೆರೆ**

ಜಾನುವಾರುಗಳಲ್ಲಿ ಕಂಡುಬರುವ ಕಾಲುಬಾಯಿ ರೋಗ ನಿಯಂತ್ರಣಕ್ಕೆ ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಕಾರ್ಯಕ್ರಮದಡಿ ಕಾಲುಬಾಯಿ ಲಸಿಕಾ ಅಭಿಯಾನ ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ ಏ. 1ರಿಂದ 30ರವರೆಗೆ ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ. ತಿಳಿಸಿದರು. ಶುಕ್ರವಾರ(ಮಾ.22) ರಂದು ನಡೆದ ಕಾಲುಬಾಯಿ ರೋಗ ಲಸಿಕಾ ಅಭಿಯಾನದ ಪೂರ್ವಭಾವಿ ಸಭೆಯಲ್ಲಿ ಪರಿಶೀಲನೆ ನಡೆಸಿ ಮಾತನಾಡಿದರು. ಲಸಿಕೆ ಕಾರ್ಯಕ್ಕೆ ಪಶು ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಲಿದ್ದು, ಈ ಸಂದರ್ಭದಲ್ಲಿ ಸಾರ್ವಜನಿಕರು ಅಗತ್ಯ ಸಹಕಾರ ನೀಡಬೇಕು. ಹೆಚ್ಚಿನ ಸಂಖ್ಯೆಯ ಜಾನುವಾರುಗಳಿಗೆ ಲಸಿಕೆ ಹಾಕಿಸುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು. ಕಾಲುಬಾಯಿ ರೋಗ ತಡೆಗಟ್ಟಲು ಕಡ್ಡಾಯವಾಗಿ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು. ನಿರ್ಲಕ್ಷ್ಯ ಮಾಡಿದ್ದಲ್ಲಿ ಜಾನುವಾರುಗಳಿಂದ ಜಾನುವಾರಿಗೆ ಕಾಯಿಲೆ ಹರಡುವ ಸಾಧ್ಯತೆಗಳಿದ್ದು ಸಮಸ್ಯೆ ಗಂಭೀರವಾಗಲಿದೆ. ಜಾನುವಾರುಗಳಿಗೆ ಲಸಿಕೆ ಹಾಕಿಸಿ, ರೋಗದಿಂದ ರಕ್ಷಣೆ ಮಾಡಿಕೊಳ್ಳಬೇಕು ಎಂದರು. ರೈತರಿಗೆ ಲಸಿಕಾ ಕಾರ್ಯಕ್ರಮದ ಕುರಿತು ಅರಿವು ಮೂಡಿಸುವುದರೊಂದಿಗೆ ಶೇಖಡಾವಾರು ಗುರಿ ಸಾಧನೆಗೆ ಕ್ರಮಕೈಗೊಳ್ಳಬೇಕು. ಕಾಲು ಬಾಯಿ ರೋಗವು ಎತ್ತು, ಹೋರಿ, ಹಸು ಎಮ್ಮೆ ಮತ್ತು ಹಂದಿಗಳಲ್ಲಿ ಬಂದು ಮಾಲಿಕರಿಗೆ ಆರ್ಥಿಕತೆ ನಷ್ಟ ಉಂಟುಮಾಡುವ ಮಾರಕ ರೋಗವಾಗಿದೆ. ರೋಗದಿಂದ ಗುಣಮುಖವಾದ ಜಾನುವಾರುಗಳಲ್ಲಿ ಗರ್ಭಕಟ್ಟುವಿಕೆಯಲ್ಲಿ ವಿಳಂಬ, ಸಾಮರ್ಥ್ಯ ನಷ್ಟ ಮತ್ತು ಹಾಲಿನ ಇಳುವರಿಯಲ್ಲಿ ಇಳಿಮುಖವಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ರೋಗದಿಂದ ಪೂರ್ಣ ಸುರಕ್ಷತೆಗಾಗಿ ಮೂರು ತಿಂಗಳ ಮೇಲ್ಪಟ್ಟ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕುವುದು ಅತ್ಯಗತ್ಯವಾಗಿದೆ. ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಚಂದ್ರಶೇಖರ್ ಸುಂಕದ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಂಟ್ರೋಲ್ ರೂಂ ಆರಂಭ

**ಬಳ್ಳಾರಿ:** ಲೋಕಸಭೆ ಸಾರ್ವತ್ರಿಕ ಚುನಾವಣೆ 2024ರ ಅಂಗವಾಗಿ ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಸುಗಮ ಹಾಗೂ ಪಾರದರ್ಶಕ ಚುನಾವಣೆಯನ್ನು ನಡೆಸುವ ಸಂಬಂಧ ಸಾರ್ವಜನಿಕರ ದೂರು-ದುಮ್ಮಾನಗಳನ್ನು ಆಲಿಸಲು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸ್ಥಾಪಿಸಲಾಗಿದೆ.

## ಪ್ರಮುಖ ಸುದ್ದಿ

# ಸ್ಫೂರ್ತಿದಾಯಕ ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಗಳಲ್ಲಿ ಭಾಗವಹಿಸಿ

» **ಚಿತ್ರದುರ್ಗ**



ನಗರ ಜೀವನದ ಸೆಳೆತಕ್ಕೆ ಮಾರುಹೋಗಿ ,ಅಪ್ಪಟ ದೇಸೀತನವಿರುವ ಗ್ರಾಮೀಣರ ಬದುಕಿನಿಂದ ನಾವು ದೂರ ಸಾಗಬಾರದು. ಅದಕ್ಕಾಗಿ ಇಂತಹ ಸ್ಫೂರ್ತಿದಾಯಕ ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಗಳಲ್ಲಿ ಭಾಗವಹಿಸಿ ಭಿನ್ನ ಬಗೆಯ ಅನುಭವ ಪಡೆಯುವುದು ಶ್ರೇಯಸ್ಕರ ಎಂದು ಚಿನ್ಮುಲಾದ್ರಿ ವಲಯದ ರೋಟರಿಯ ಅಸಿಸ್ಟೆಂಟ್ ಗವರ್ನರ್ ಉಮೇಶ್ ವೀರಣ್ಣ ತುಪ್ಪದ್ ಅವರು ಅಭಿಪ್ರಾಯ ಪಟ್ಟರು.

ಅವರು ಚಿತ್ರದುರ್ಗದ ಎಸ್.ಜೆ .ಎಂ.ವಿದ್ಯಾಪೀಠ , ಯುವ ಸಬಲೀಕರಣ ಇಲಾಖೆ ಕರ್ನಾಟಕ ಸರ್ಕಾರ,ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು ಹಾಗೂ ಎಸ್. ಜೆ.ಎಮ್. ಪಾಲಿಟೆಕ್ನಿಕ್ ಚಿತ್ರದುರ್ಗ, ಇವರ ಸಂಯುಕ್ತಾಶ್ರಯದಲ್ಲಿ ತಾಲ್ಲೂಕಿನ ಪಂಡರಹಳ್ಳಿ ಗ್ರಾಮದಲ್ಲಿ ಏರ್ಪಡಿಸಿರುವ ಎನ್ ಎಸ್ ಎಸ್ ಶಿಬಿರದ ಎರಡನೇ ದಿನದ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಮತ್ತೋರ್ವ ಅತಿಥಿ ರೋಟರಿ ಕ್ಲಬ್ ಚಿತ್ರದುರ್ಗ ಫೋರ್ಟ್ ನ ಅಧ್ಯಕ್ಷರಾದ ಗಿರೀಶ್. ಎಂ ಅವರು ಯುವಕರಿಗೆ ಮಾದರಿ ಎಂದರೆ ಸ್ವಾಮಿ ವಿವೇಕಾನಂದರು. ಯುವಕರು ಜಾಗೃತರಾಗಿ ಕೆಲಸ ನಿರ್ವಹಿಸಿದರೆ ಯಾವುದು ಅಸಾಧ್ಯವೇನಲ್ಲ.ವಿವೇಕಾನಂದ ಅಂತಹವರ ನೀತಿಯನ್ನು ನಾವು ಪಾಲಿಸಬೇಕೆಂದು ಸಲಹೆ ಮಾಡಿದರು.

ಎಸ್ ಜೆ ಎಂ ಪಾಲಿಟೆಕ್ನಿಕ್ ನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಎಸ್.ಮೋಹನ್ ಕುಮಾರ್ ಉಪಸ್ಥಿತರಿದ್ದು ಸಭೆ ಕುರಿತು ಮಾತನಾಡಿದರು. ವೇದಿಕೆಯಲ್ಲಿ ಗ್ರಾಮದ ಮುಖ್ಯಸ್ಥರಾದ ಶೇಖರಪ್ಪ ,ಗೊಡಬನಾಳ್ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಮಾರುತಿ. ಎ.ಹಾಗೂ ಎನ್ ಎಸ್ ಎಸ್ ಶಿಬಿರಾಧಿಕಾರಿ ಗೋವಿಂದರಾಜು. ಟಿ.ಉಪಸ್ಥಿತರಿದ್ದರು. ಶಿಬಿರದ ಮೇಲ್ವಿಚಾರಕ ಕೆ.ಸುರೇಶ್ ಸ್ವಾಗತಿಸಿ ಕಾರ್ಯಕ್ರಮ ನಿರ್ವಹಿಸಿದರು. ನಂತರ ಶಿಬಿರಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಶಿಬಿರದ ಮೂರನೇ ದಿನವಾದ ಶುಕ್ರವಾರ ಬೆಳಗ್ಗೆ ಶಾಲಾ ಆವರಣದಲ್ಲಿ ಗೊಡಬನಾಳ್ ಗ್ರಾಮ ಪಂಚಾಯಿತಿ ಸದಸ್ಯರಾದ ಪಂಡರಹಳ್ಳಿಯ ಶಶಿರೇಖಾಮಂಜುನಾಥ್ ಅವರು ಧ್ವಜಾರೋಹಣ ನೇರವೇರಿಸಿ ಕರೋನಾ ಸಂದರ್ಭದಲ್ಲಿ ಜನಜೀವನ ಅಸ್ವಸ್ಥಗೊಂಡ ಬಗೆಗಿನ ಸ್ವರಚಿತ ಕವನ ವಾಚಿಸಿದರು.

ನಂತರದಲ್ಲಿ ಚಿತ್ರದುರ್ಗ ಬಸವೇಶ್ವರ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ವತಿಯಿಂದ ಗ್ರಾಮದ ಜನತೆಗೆ ,ವಿದ್ಯಾರ್ಥಿಗಳಿಗೆ ಹಾಗೂ ಶಿಬಿರಾರ್ಥಿಗಳಿಗೆ ಉಚಿತ ತಪಾಸಣಾ ಶಿಬಿರವು ತಜ್ಞ ವೈದ್ಯರುಗಳಾದ ಡಾ.ತುಷಾರ್,ಡಾ. ಅಬ್ದುಲ್, ಡಾ.ಐಶ್ವರ್ಯ, ಡಾ.ಆದಿತ್ಯ ಮತ್ತು ತಂಡದವರಿಂದ ನೂರಾರು ಜನರಿಗೆ ವಿವಿಧ ಬಗೆಯ ಕಾಯಿಲೆಗಳವರಿಗೆ ತಪಾಸಣೆ ಮಾಡಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T